MAA ಫ್ರೆಂಡ್ಸ್ ಸಾರಥ್ಯದಲ್ಲಿ...

www.yuvamarga.com Yuva Marga yuva_marga_

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

| ಸಂಪುಟ: 05 | ಸಂಚಿಕೆ: 79 | ಶನಿವಾರ : 10–01–2026 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2–00 |
|---|---|---|---|---|---|---|
| VOLUME: 05 | ISSUE: 79 | SATURDAY : 10–01–2026 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00 |

## ರಾಯಚೂರು ಉತ್ಸವದಲ್ಲಿ ಎಲ್ಲರೂ ಭಾಗಿಯಾಗೋಣ: ಎನ್ ಎಸ್ ಬೋಸರಾಜು ಮನವಿ

ಯುವಮಾರ್ಗ ಸುದ್ದಿ

**ರಾಯಚೂರು,ಜ.9–** ಜನವರಿ 29, 30 ಹಾಗೂ 31ರಂದು ಆಯೋಜನೆ ಮಾಡಲಾದ ರಾಯಚೂರು ಜಿಲ್ಲಾ ಉತ್ಸವದಲ್ಲಿ ಎಲ್ಲರೂ ಭಾಗಿಯಾಗೋಣ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್ ಎಸ್ ಬೋಸರಾಜು ಅವರು ರಾಯಚೂರು ಜಿಲ್ಲೆಯ ಸಾರ್ವಜನಿಕರಲ್ಲಿ ಸಲಹೆ ಮಾಡಿದರು.


ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜನವರಿ 9ರಂದು ನಗರದ ವಿವಿಧ ಸಂಘ–ಸಂಸ್ಥೆಗಳ ಪ್ರಮುಖರು ಹಾಗೂ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ರಾಯಚೂರು ಜಿಲ್ಲೆಯಲ್ಲಿ ಬಹುವರ್ಷಗಳ ನಂತರ ಉತ್ಸವವು ನಿಗದಿಯಾಗಿದೆ. ಇದು ಸಾರ್ವಜನಿಕ ಉತ್ಸವ ಆಗಿರುವುದರಿಂದ ಸಂಘ–ಸಂಸ್ಥೆಗಳ ಪ್ರಮುಖರು ತನುಮನಧನದ ಮೂಲಕ ಉತ್ಸವದಲ್ಲಿ ಭಾಗಿಯಾಗಬೇಕು ಎಂದು ಸಚಿವರು ಮನವಿ ಮಾಡಿದರು.

ಈ ವೇಳೆ ಚೆಂಬರ್ ಆಫ್ ಕಾಮರ್ಸನ ಎಸ್ ಕಮಲಕುಮಾರ ಅವರು ಮಾತನಾಡಿ, ಅತ್ಯಂತ ಪ್ರಶಸಾಂರ್ಹ ಕಾರ್ಯವನ್ನು ಜಿಲ್ಲಾಡಳಿತವು ಉತ್ಸವವನ್ನು ನಿಗದಿ ಮಾಡುವ ಮೂಲಕ ಮಾಡಿದೆ ಎಂದರು. ತಾವು ತನುಮನಧನದೊಂದಿಗೆ ಉತ್ಸವಕ್ಕೆ ಜೊತೆಯಾಗುವುದಾಗಿ ತಿಳಿಸಿದರು.

ರಾಯಚೂರು ಉತ್ಸವ ಹಮ್ಮಿಕೊಂಡಿದಕ್ಕೆ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದಿಂದ ಅಭಿನಂದಿಸುತ್ತೇವೆ. ಎಲ್ಲ ರೀತಿಯ ಸಹಕಾರ ಕೊಡುತ್ತೇವೆ ಎಂದು ಎಸ್.ಕೆ.ನಾಗಿರಡ್ಡಿ ತಿಳಿಸಿದರು. ರಾಯಚೂರು ಉತ್ಸವವು ಸಾಂಸ್ಕೃತಿಕ ಹಬ್ಬವಾಗಿದೆ. ಈ ಉತ್ಸವಕ್ಕೆ ಎಲ್ಲ ಖಾಸಗಿ ಶಿಕ್ಷಣ ಸಂಸ್ಥೆಗಳಿಂದ ಎಲ್ಲ ರೀತಿಯ ಸಹಕಾರ ನೀಡುತ್ತೇವೆ. ಖಾಸಗಿ ಶಾಲೆಗಳ ವಿದ್ಯಾರ್ಥಿಗಳನ್ನು ಕಾರ್ಯಕ್ರಮಕ್ಕೆ ಕರೆ ತರುತ್ತೇವೆ. ನಮ್ಮ ಶಾಲೆಗಳಲ್ಲಿನ ದೈಹಿಕ ಶಿಕ್ಷಣ, ಡ್ರಾಯಿಂಗ್ ಟೀಚರ್ ಸೇರಿದಂತೆ ಶಾಲೆಯ ಎನ್‌ಎಸ್‌ಎಸ್ ಮತ್ತು ಸ್ಕೌಟ್ಸ್ ಮತ್ತು ಗೈಡ್ಸ್ನ ತಂಡಗಳನ್ನು ಬೇರೆ ಬೇರೆ ಕಾರ್ಯಗಳಿಗೆ ನಿಯೋಜನೆ ಮಾಡಿ ಸಹಕಾರ ನೀಡುತ್ತೇವೆ ಎಂದು ರುಷ್ಮಾ ಶಿಕ್ಷಣ ಸಂಸ್ಥೆಯ ರಾಜಾ ಶ್ರೀನಿವಾಸ ತಿಳಿಸಿದರು. ಉತ್ಸವದಲ್ಲಿ ನಾವು ಸಂಪೂರ್ಣ ಭಾಗಿಯಾಗುತ್ತೇವೆ. ನಮಗು ಸಹ ಬೇರೆ ಬೇರೆ ಕಾರ್ಯಗಳಿಗೆ ಜವಾ ಬ್ದಾರಿ ವಹಿಸಿದರೆ ಜೊತೆಗಿದ್ದು ನಿರ್ವಹಿಸುತ್ತೇವೆ ಎಂದು ರೈಸ್ ಮಿಲ್ ಅಸೋಸಿಯೇಶನ್‌ದ ಎಸ್ ಪುರುಷೋತ್ತಮ ಹಾಗೂ ಅವರ ತಂಡದವರು ತಿಳಿಸಿದರು.

ಉತ್ಸವದ ಮೆರವಣಿಗೆಯು ಐತಿಹಾಸಿಕ ಕರ್ನಾಟಕ ಸಂಘದಿಂದಲೇ ಆರಂಭವಾಗಬೇಕು. ಹಾಗಾದಲ್ಲಿ



ನಗರದ ಎಲ್ಲ ಜನತೆಗೆ ಉತ್ಸವದಲ್ಲಿ ಭಾಗಿಯಾಗುವ ಕಲಾ ತಂಡಗಳ ರಸದೌತಣ ಸವಿಯಲು ಮತ್ತು ಉತ್ಸವದ ಬಗ್ಗೆ ಜನತೆಗೆ ತಿಳಿದು ಭಾಗಿಯಾಗಲು ಅನುಕೂಲವಾಗುತ್ತದೆ ಎಂದು ಕರ್ನಾಟಕ ಸಂಘದ ಅಧ್ಯಕ್ಷ ಕೆ.ಶಾಂತಪ್ಪ ಸಭೆಗೆ ಸಲಹೆ ಮಾಡಿದರು.

ಸ್ಕೌಟ್ಸ್ ಮತ್ತು ಗೈಡ್ಸನ ಎನ್ ಶೇಖರ ಮಾತನಾಡಿ, ಉತ್ಸವದ ನಾನಾ ಕಾರ್ಯಗಳಿಗೆ ತಾವು ತಮ್ಮ ಸ್ಕೌಟ್ಸ್ ಮತ್ತು ಗೈಡ್ಸ್ ತಂಡದೊಂದಿಗೆ ಹಾಜರಾಗುವುದಾಗಿ ಹೇಳಿದರು. ಸಭೆಯಲ್ಲಿ ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ ಭಜಂತ್ರಿ, ರಾಯಚೂರು ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್, ಪೊಲೀಸ್ ಇಲಾಖೆಯ ಡಿಎಸ್ಪಿ ಡಾ.ಶಾಂತವೀರ, ಮಹಾನಗರ ಪಾಲಿಕೆ ಜೋನಲ್ 1ರ ಸಹಾಯಕ ಆಯುಕ್ತರಾದ ಪುರುರಾಜ ಸೋಲಂಕಿ ಹಾಗೂ ಇನ್ನಿತರರು ಇದ್ದರು.

## ಸರ್ವೋದಯ ಶಿಕ್ಷಣ ಸಂಸ್ಥೆಯಲ್ಲಿ ವಿದ್ಯಾರ್ಥಿಗಳಿಗೆ ಸ್ವಾಗತ ಹಾಗೂ ಬಿಳ್ಕೋಡುಗೆ ಸಮಾರಂಭ

### ಕಲ್ಯಾಣ ಕರ್ನಾಟಕ ಭಾಗದ ಶೈಕ್ಷಣಿಕ ಅಭಿವೃದ್ದಿಗೆ ಮುಖ್ಯಮಂತ್ರಿಗಳಿಂದ ಸಾಕಷ್ಟು ಅನುದಾನ: ಎನ್.ಎಸ್.ಬಿ

ಯುವಮಾರ್ಗ ಸುದ್ದಿ

**ಮಾನ್ವಿ,ಜ.9–** ಪಟ್ಟಣದ ಸರ್ವೋದಯ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ನಡೆದ ವಿದ್ಯಾರ್ಥಿಗಳಿಗೆ ಸ್ವಾಗತ ಹಾಗೂ ಬಿಳ್ಕೋಡುಗೆ ಕಾರ್ಯಕ್ರಮವನ್ನು ರಾಜ್ಯ ಸಣ್ಣ ನೀರಾವರಿ ಹಾಗೂ ವಿಜ್ಞಾನ ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಉದ್ಘಾಟಿಸಿ ಮಾತನಾಡಿ ರಾಜ್ಯ ಸರ್ಕಾರದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು ಹಿಂದುಳಿದ ಕಲ್ಯಾಣ ಕರ್ನಾಟಕ ಭಾಗದ ಶೈಕ್ಷಣಿಕ ಅಭಿವೃದ್ದಿಗೆ ಸಾಕಷ್ಟು ಯೋಜನೆಗಳು ರೂಪಿಸುತ್ತಿದೆ ಹಾಗೂ ಕಲ್ಯಾಣ ಕರ್ನಾಟಕ ಅಭಿವೃದ್ದಿ ಮಂಡಳಿಗೆ ಮುಖ್ಯಮಂತ್ರಿಗಳು ಪ್ರತಿ ವರ್ಷ 5ಸಾವಿರ ಕೋಟಿ ಅನುದಾನವನ್ನು ನೀಡುತ್ತಿದ್ದು ಅದರಲ್ಲಿ 1250 ಕೋಟಿ ಅನುದಾನವನ್ನು ಈ ಭಾಗದ ಸರ್ಕಾರಿ ಶಾಲೆಗಳಲ್ಲಿ ಮೂಲ ಸೌಕರ್ಯ ಅಭಿವೃದ್ದಿಗಾಗಿ ಬಳಸಲಾಗುತ್ತಿದೆ. ಕೇಂದ್ರದಲ್ಲಿ ಯು.ಪಿ.ಐ. ಸರ್ಕಾರದ ಅವಧಿಯಲ್ಲಿ 371 ಜೆ ಜಾರಿಯಾದನಂತರ ಈ ಭಾಗದಲ್ಲಿ ಶೈಕ್ಷಣಿಕ ಪ್ರಗತಿಯನ್ನು ಕಾಣಬಹುದಾಗಿದೆ. ಸರ್ಕಾರಿ ಶಾಲೆಗಳಲ್ಲಿ ಅನುಭವಿ ಉತ್ತಮ ಶಿಕ್ಷಕರನ್ನು ನೇಮಕಮಾಡಲಾಗಿದೆ ಹಾಗೂ ವಿದ್ಯಾರ್ಥಿಗಳಿಗೆ ಅಗತ್ಯವಿರುವ ಪಠ್ಯ ಪರಿಕರಗಳು ಸೇರಿದಂತೆ ಉಚಿತ ಶಿಕ್ಷಣವನ್ನು ನೀಡಲಾಗುತ್ತಿದೆ ಅಜೀಂ ಪ್ರೇಮ್ ಜಿ ಫೌಂಡೇಶನ್ ಸಹಕಾರದಲ್ಲಿ 17ನೂರು ಕೋಟಿ ವೆಚ್ಚದಲ್ಲಿ ಮಕ್ಕಳಿಗೆ ಪೌಷ್ಟಿಕತೆಯನ್ನು ಹೆಚ್ಚಿಸುವುದಕ್ಕಾಗಿ ಶಾಲೆಗಳಲ್ಲಿ ಮಧ್ಯಾಹ್ನದ ಬಿಸಿಯೂಟದ



ನಂತರ ಮೊಟ್ಟೆ ಹಾಗೂ ಬಾಳೆ ಹಣ್ಣು ನೀಡಲಾಗುತ್ತಿದೆ ಪಾಲಕರ ಅಪೇಕ್ಷೆಯಂತೆ ಅಂಗ್ಲ ಮಾಧ್ಯಮದಲ್ಲಿ ಶಿಕ್ಷಣವನ್ನು ನೀಡುವುದಕ್ಕಾಗಿ ರಾಜ್ಯದ 220 ಕ್ಷೇತ್ರಗಳಲ್ಲಿ 0ಯಿಂದ ಪಿ.ಯುಸಿ ವರೆಗೆ ಅಂಗ್ಲ ಮಾಧ್ಯಮದಲ್ಲಿ ಶಿಕ್ಷಣವನ್ನು ಭೋಧಿಸುವ ಪಬ್ಲಿಕ್ ಶಾಲೆಗಳ ಪ್ರಾರಂಭಕ್ಕೆ ಚಾಲನೆ ನೀಡಲಾಗಿದೆ ಮಾನ್ವಿ ತಾಲೂಕಿಗೆ 9 ಪಬ್ಲಿಕ್ ಶಾಲೆಗಳು ಮಂಜೂರಾಗಿವೆ. ಪ್ರವಾಸಿ ಮಂದಿರದಿಂದ 30ಕೋಟಿ ವೆಚ್ಚದಲ್ಲಿ ರಸ್ತೆ ಅಗಲಿಕರಣ ,ಚಂರಂಡಿಗಳ ಅಭಿವೃದ್ದಿ ಮಾಡಲಾಗುತ್ತಿದೆ.ನಮ್ಮ ಸರ್ಕಾರ ಆರೋಗ್ಯ ಕ್ಷೇತ್ರದ ಅಭಿವೃದ್ದಿಗೆ ಕೂಡ ಹೆಚ್ಚಿನ ಅನುದಾನ ನೀಡಿದೆ ಪ್ಯಾರ ಮೆಡಿಕಲ್ ಹಾಗೂ ಆಯುರ್ವೆದ ಕಾಲೇಜುಗಳ ಅಭಿವೃದ್ದಿಗಾಗಿ ಸಾಕಷ್ಟು ಅವಕಾಶ ನೀಡಲಾಗುತ್ತಿದೆ.ರಾಜ್ಯದಲ್ಲಿನ ಹಿಂದುಳಿದ ಪ್ರದೇಶಗಳ ಅಭಿವೃದ್ದಿಗೆ ಸರ್ಕಾರ ಸಾಕಷ್ಟು ಅನುದಾನ ನೀಡುತ್ತಿದೆ. ಮಾ ಸ್ನೆಹಿತರೆಂದ ಪರಿಚಿತರಾದ ಮನೋಜ್ ಕುಮಾರ ಮಿಶ್ರಾ, ಆನೀಲ್ ಕುಮಾರ್,ಆಂಜನೇಯ್ಯ ರವರು ಕಳೆದ 15 ವರ್ಷಗಳಿಂದ ತಾಲೂಕಿನಲ್ಲಿ ವಿವಿಧ ಶಿಕ್ಷಣ ಸಂಸ್ಥೆಗಳನ್ನು ಪ್ರಾರಂಭಿಸಿ ಈ ಭಾಗದಲ್ಲಿ ಶೈಕ್ಷಣಿಕ ಅಭಿವೃದ್ದಿಗೆ ಶ್ರಮಿಸುತ್ತಿದ್ದಾರೆ. ನಾಡಿನ ಮಠಗಳು, ಸಂಘ ಸಂಸ್ಥೆಗಳು ರಾಜ್ಯದಲ್ಲಿ ಶಿಕ್ಷಣ ಸಂಸ್ಥೆಗಳನ್ನು ಪ್ರಾರಂಭಿಸುವ ಮೂಲಕ ಶೈಕ್ಷಣಿಕ ಅಭಿವೃದ್ದಿಗೆ ಶ್ರಮಿಸುತ್ತಿವೆ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿನ ಸಮಸ್ಯೆಗಳ ನಿವಾರಣೆಗಾಗಿ ಗೃಹ ಮಂತ್ರಿ ಡಾ.ಪರಮೇಶ್ ರವರ ನೇತೃತ್ವದಲ್ಲಿ ಮುಖ್ಯಮಂತ್ರಿಗಳು ಸಮಿತಿಯನ್ನು ರಚಿಸಿದು ಸಮಿತಿಯ ವರದಿಯನ್ನು ಅಧಾರಿಸಿ ಖಾಸಗಿ ಶಾಲೆಗಳ ಅಭಿವೃದ್ದಿಗೆ ಸರ್ಕಾರದಿಂದ ಅಗತ್ಯ ನೆರವು ನೀಡಲಾಗುವುದು. ಶಿಕ್ಷಣ ಸಂಸ್ಥೆಗಳು ಶಿಕ್ಷಣವನ್ನು ವ್ಯಾಪಾರಿ ಮನೋಭವನೆ ಹೊಂದದೆ ಸೇವಾ ಮನೋಭವನೆಯಿಂದ ನೋಡಿದಾಗ ಮಾತ್ರ ಶೈಕ್ಷಣಿಕ ಅಭಿವೃದ್ದಿ ಸಾಧ್ಯವಾಗುತ್ತದೆ ಕಲ್ಮಲದಿಂದ ಸಿಂಧನೂರು ವರೆಗೆ ಪ್ರತಿ ಕಿ,ಮೀ,ಗೆ 25 ಕೋಟಿ ವೆಚ್ಚದಲ್ಲಿ 1600ಕೋಟಿ ವೆಚ್ಚದಲ್ಲಿ 75 ಕಿ.ಮೀ. ಚತುಷ್ಪಥ ರಸ್ತೆ ನೀರ್ಮಾಣ ಕಾಮಗಾರಿಗೆ ಚಾಲನೆ ನೀಡಲಾಗಿದೆ ನಿರ್ಮಾಣ ಸಂಸ್ಥೆಯು ಪ್ರತಿ ವರ್ಷ 250 ಕೋಟಿ ಟೋಲ್ ಮೂಲಕ ಸಂಗ್ರಹಿಸಿ 13 ವರ್ಷಗಳ ಕಾಲ ರಸ್ತೆಯನ್ನು ನಿರ್ವಾಹಣೆ ಮಾಡಲಿದೆ ಇದ್ದರಿಂದ ಈ ಭಾಗದ ಜನರ ಸಂಚಾರಕ್ಕೆ ಅನುಕೂಲವಾಗಲಿದೆ ಎಂದು ತಿಳಿಸಿದರು.

ಶಾಸಕ ಹಂಪಯ್ಯನಾಯಕ ಮಾತನಾಡಿದರು.

ಕಲ್ಮಠ ಶ್ರೀ ವಿರೂಪಾಕ್ಷ ಪಂಡಿತಾರಾಧ್ಯಶಿವಾಚಾರ್ಯ ಮಹಾಸ್ವಾಮಿಗಳು ಆಶೀರ್ವಾಚನ ನೀಡಿ ಶಿಕ್ಷಣದ ಜೋತೆಗೆ ವಿದ್ಯಾರ್ಥಿಗಳಿಗೆ ಸಂಸ್ಕಾರವನ್ನು ನೀಡಿದಾಗ ಮಾತ್ರ ವಿದ್ಯಾರ್ಥಿಗಳ ಮುಂದಿನ ಜೀವನ ಉತ್ತಮವಾಗಿರುವುದಕ್ಕೆ ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಚೀಕಲಪರ್ವಿ ಶ್ರೀ ರುದ್ರಮುನೀಶ್ವರ ಮಠದ ಶ್ರೀ ಸದಾಶಿವ ಮಹಾಸ್ವಾಮಿಗಳು ಆಶೀರ್ವಾಚನ ನೀಡಿದರು. ಕಾರ್ಯಕ್ರಮದಲ್ಲಿ ಕ.ಸಾ.ಪ. ಜಿಲ್ಲಾ ಗೌ,ಕಾರ್ಯದರ್ಶಿ ತಾಯಪ್ಪ.ಬಿ.ಹೊಸೂರ, ಲಿಂಗಸೂಗೂರು ಸ್ವಾಮಿ ವಿವೇಕನಂದ ಆಯುರ್ವೇದ ವೈದ್ಯಕೀಯ ಕಾಲೇಜಿನ ಪ್ರಾಂಶುಪಾಲರಾದ ಡಾ.ರಾಜಶೇಖರ,ಸಲ್ಲಾವುದಿನ್ ಪಕ್ಷಿ ಪ್ರೇಮಿ, ರವರನ್ನು ಹಾಗೂ ಉತ್ತಮ ಅಂಕಗಳನ್ನು ಪಡೆದ ಶಿಕ್ಷಣ ಸಂಸ್ಥೆಯ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು.

ಸರ್ವೋದಯ ಶಿಕ್ಷಣ ಸಂಸ್ಥೆಯ ಮುಖ್ಯಸ್ಥರಾದ ಮನೋಜ್ ಕುಮಾರ ಮಿಶ್ರಾ, ಆನೀಲ್ ಕುಮಾರ್,ಆಂಜನೇಯ್ಯ, ನಯೋಪ್ರ ಅಧ್ಯಕ್ಷರಾದ ಅಬ್ದುಲ್ ಗಫೂರಸಾಬ್, ಜಯಪ್ರಕಾಶ, ತಾ.ಖಾ.ಶಿ.ಸಂ,ಒಕ್ಕೂಟದ ಅಧ್ಯಕ್ಷರಾದ ರಾಜಾ ಸುಭಾಶ್ಚಂದ್ರನಾಯಕ, ಶರ್ಫುದಿನ್ನ್ ಪೋತ್ನಾಳ್ ತಾ.ಆರೋಗ್ಯಧಿಕಾರಿ ಡಾ.ಶರಣಬಸವರಾಜ, ಬಿ.ಇ.ಓ.ಚಂದ್ರಶೇಖರ .ಡಿ, ಜೆಸ್ಕಾಂ ಎ.ಇ.ಇ.ವೈದ್ಯನಾಥ್, ಲಿಂಗಸೂಗೂರು ಸ್ವಾಮಿ ವಿವೇಕನಂದ ಆಯುರ್ವೇದ ವೈದ್ಯಕೀಯ ಕಾಲೇಜಿನ ಅಧ್ಯಕ್ಷರಾದ ಶಾಂತನಗೌಡ, ಖಾಲೀದ್ ಖಾದ್ರಿ,ಡಾ.ಆಸಿಫ್, ಕೆ.ಬಸವಂತಪ್ಪ, ರಾಮಕೃಷ್ಣ, ಇರ್ಫಾನ್ ಕೆ.ಅತ್ತರ್ , ಪ್ರವೀಣ್ ಕುಮಾರ, ಸರ್ವೋದಯ ಶಿಕ್ಷಣ ಸಂಸ್ಥೆಯ ದತಾತ್ರೇಯಮೇಟಿ, ಸರ್ವೋದಯ ಪಬ್ಲಿಕ್ ಸ್ಕೂಲ್‌ನ ಮುಖ್ಯಗುರು ರಂಗಪ್ಪ, ಸರ್ವೋದಯ ಸ್ಕೂಲ್ ಆಫ್ ನರ್ಸಿಂಗ್ ಮತ್ತು ಪ್ಯಾರ ಮೆಡಿಕಲ್ ಕಾಲೇಜಿನ ಪ್ರಾಚಾರ್ಯರಾದ ಶಿವಕುಮಾರ, ಸರ್ವೋದಯ ಫಾರ್ಮಸಿ ಕಾಲೇಜಿನ ಪ್ರಾಚಾರ್ಯರಾದ ನವೀನ್, ಸರ್ವೋದಯ ಪಿ.ಯು, ಕಾಲೇಜಿನ ಪ್ರಾಚಾರ್ಯರಾದ ರೇಣುಕಮ್ಮ ಸೇರಿದಂತೆ ಶಿಕ್ಷಣ ಸಂಸ್ಥೆಯಲ್ಲಿನ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಇದ್ದರು.

### ಗರ್ಭಕಂಠದ ಕ್ಯಾನ್ಸರ್ ತಡೆಗೆ ಸರಕಾರದ ಮಹತ್ವಾಕಾಂಕ್ಷಿ ಯೋಜನೆ

## 9 ರಿಂದ 14 ವರ್ಷದ ಹೆಣ್ಣುಮಕ್ಕಳಿಗೆ ಉಚಿತ ಹೆಚ್‌ಪಿವಿ ಲಸಿಕೆಗೆ ಜಾಗೃತಿ ನೀಡಿ: ಡಾ.ಸುರೇಂದ್ರ ಬಾಬು



ಯುವಮಾರ್ಗ ಸುದ್ದಿ

**ರಾಯಚೂರು,ಜ.9–** ಹೆಣ್ಣು ಮಕ್ಕಳ ಜೀವನದಲ್ಲಿ ಗಂಭೀರತೆಯನ್ನು ಉಂಟು ಮಾಡುವ ಜೊತೆ ಜೊತೆಗೆ ಜೀವನಪೂರ್ತಿ ಕೊರಗುವಿಕೆಗೆ ಕಾರಣ ವಾಗುವ ಗರ್ಭಕಂಠದ ಕ್ಯಾನ್ಸರ್ ತಡೆಗೆ ರಾಜ್ಯ ಸರಕಾರವು ದಿಟ್ಟಹೆಜ್ಜೆ ಇಟ್ಟಿದ್ದು, 09 ರಿಂದ 14 ವರ್ಷದೊಳಗಿನ ಶಾಲಾ ಹೆಣ್ಣು ಮಕ್ಕಳಿಗೆ ಜಿಲ್ಲೆಯಲ್ಲಿ ಉಚಿತ ಹ್ಯೂಮನ್ ಪ್ಯಾಪಿಲೋಮ ವೈರಸ್ (ಹೆಚ್‌ಪಿವಿ) ಲಸಿಕೆಯನ್ನು ಹಾಕುವ ಕುರಿತು ಇಂದಿನಿಂದಲೇ ವ್ಯಾಪಕ ಮಾಹಿತಿಯನ್ನು ಶಾಲಾ ಮಟ್ಟದಲ್ಲಿ ನೀಡಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಂದ್ರ ಬಾಬು ಅವರು ಹೇಳಿದರು.

ಜನವರಿ 09ರ ಶುಕ್ರವಾರ ದಂದು ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕೃಷ್ಣ ಸಭಾಂಗಣದಲ್ಲಿ ಜರುಗಿದ ಹೆಚ್‌ಪಿವಿ ಲಸಿಕೆ ಕುರಿತು ತರಬೇತಿ ಕಾರ್ಯಾಗಾರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಸಾಮಾನ್ಯವಾಗಿ ವೈಯಕ್ತಿಕ ಶುಚಿತ್ವ, ಜನನಾಂಗಗಳಲ್ಲಿ ತೊಂದರೆ, ಹುಣ್ಣು ಹಾಗೂ ಲೈಂಗಿಕ ಸಂಪರ್ಕದಿಂದ ಹರಡುವ ಹ್ಯೂಮನ್ ಪ್ಯಾಪಿಲೋಮವೈರಸ್ (ಹೆಚ್‌ಪಿವಿ) ಸೋಂಕು ನಿರಂತರವಾಗಿ ಇದ್ದು, ಕ್ರಮೇಣ ಗರ್ಭಕಂಠದ ಜೀವಕೋಶಗಳಲ್ಲಿ ಬದಲಾವಣೆಗಳಾಗಿ ಕ್ಯಾನ್ಸರ್‌ರಾಗಿ ಬದಲಾಗುತ್ತದೆ ಎಂದರು. ಈ ವೇಳೆ ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ನಂದಿತಾ ಎಮ್.ಎನ್. ಅವರು ಮಾತನಾಡಿ, ಮುಖ್ಯವಾಗಿ ಧೂಮಪಾನ, ದುರ್ಬಲ ರೋಗ ನಿರೋಧಕ ಶಕ್ತಿ, ಜನನಾಂಗದ ಸೋಂಕು, ಬಹು ಲೈಂಗಿಕ ಪಾಲುದಾರಿಕೆಯು ಗರ್ಭಕಂಠದ ಕ್ಯಾನ್ಸರ್ ಕಾರಣವಾಗಬಹುದಾಗಿದ್ದು, ಈ ಹಿನ್ನಲೆಯಲ್ಲಿ ಆರೋಗ್ಯಕ್ಕೆ ಮಾರಕವಾಗುವುದನ್ನು ತಡೆಯಲು ಹೆಚ್‌ಪಿವಿ ಲಸಿಕೆ ಮಹತ್ವಪೂರ್ಣವಾಗಿದೆ. ಮಾರ್ಗಸೂಚಿಯಡಿ 9 ರಿಂದ 14 ವರ್ಷದೊಳಗಿನ ಹೆಣ್ಣುಮಕ್ಕಳಿಗೆ ವಯಸ್ಸಿಗನುಗುಣವಾಗಿ ಉಚಿತವಾಗಿ ಚುಚ್ಚುಮದ್ದು ರೂಪದಲ್ಲಿ ನೀಡುವುದನ್ನು ವ್ಯಾಪಕವಾಗಿ ಶಾಲಾ ಮಟ್ಟದಲ್ಲಿ ಹಾಗೂ ಪಾಲಕರಿಗೂ ಮಾಹಿತಿ ಒದಗಿಸಲು ತಿಳಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಗಣೇಶ ಕೆ, ಜಿಲ್ಲಾ ಎನ್‌ಫೋಸ್ಮೆಂಟ್ ಅಧಿಕಾರಿ ಡಾ.ಶಿವಕುಮಾರ ನಾರಾ, ತಾಲೂಕಾ ಆರೋಗ್ಯ ಅಧಿಕಾರಿ ಡಾ.ಪ್ರಜ್ವಲ್ ಕುಮಾರ, ಮನೋವೈದ್ಯರು ಡಾ.ಮನೋಹರ್ ಪತ್ತಾರ, ಜಿಲ್ಲಾ ಆರೋಗ್ಯ ಶಿಕ್ಷಣಧಿಕಾರಿ ಈಶ್ವರ ಹೆಚ್. ದಾಸಪ್ಪವರ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸಯ್ಯ, ಆಪ್ತ ಸಹಾಯಕರಾದ ಲೇಪಾಕ್ಷಯ್ಯ, ಐಎಫ್‌ವಿ ಕೊಪ್ರೇ ಶ್, ರಾಘವೇಂದ್ರ ಸೇರಿದಂತೆ ಜಿಲ್ಲೆಯ ಎಲ್ಲ ವೈದ್ಯಾಧಿಕಾರಿಗಳು, ತಾಲೂಕಾ ಮೇಲ್ವಿಚಾರಕರು, ಬಿಪಿಎಮ್, ಆಶಾ ಮೇಲ್ವಿಚಾರಕರು ಇದ್ದರು.

## ಗಣರಾಜ್ಯೋತ್ಸವಕ್ಕೆ ಅಗತ್ಯ ಸಿದ್ಧತೆಯಾಗಲಿ ಅಪರ ಜಿಲ್ಲಾಧಿಕಾರಿ ಶಿವಾನಂದ ಸೂಚನೆ



ಯುವಮಾರ್ಗ ಸುದ್ದಿ

**ರಾಯಚೂರು,ಜ.9–** ನಗರದ ಮಹಾತ್ಮ ಗಾಂಧೀಜಿ ಜಿಲ್ಲಾ ಕ್ರೀಡಾಂಗಣದಲ್ಲಿ ಜನವರಿ 26ರಂದು ಜರುಗುವ ಗಣರಾಜ್ಯೋತ್ಸವ ಆಚರಣೆಗೆ ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜನವರಿ 09ರ ಶುಕ್ರವಾರ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಗಣರಾಜ್ಯೋತ್ಸವ ಆಚರಣೆಯ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಾರ್ಯಕ್ರಮದಲ್ಲಿ ಶಿಷ್ಟಾಚಾರ ಉಲ್ಲಂಘನೆ ಆಗದಂತೆ ಎಲ್ಲಾ ಅಧಿಕಾರಿಗಳು ಎಚ್ಚರವಹಿಸಬೇಕು. ಗಣರಾಜ್ಯೋತ್ಸವ ಕಾರ್ಯಕ್ರಮದ ಕುರಿತು ಆಹ್ವಾನ ಪತ್ರಿಕೆಗಳನ್ನು ಶಿಷ್ಟಾಚಾರದಂತೆ ಮುದ್ರಿಸಿ, ಜಿಲ್ಲೆಯ ಎಲ್ಲಾ ಜನಪ್ರತಿನಿಧಿಗಳಿಗೆ ತಲುಪಿಸಬೇಕು. ಕಾರ್ಯಕ್ರಮದಲ್ಲಿ ಪೊಲೀಸ್, ಗೃಹ ರಕ್ಷಕ, ಎನ್.ಸಿ.ಸಿ., ಸ್ಕೌಟ್ಸ್ ಮತ್ತು ಗೈಡ್ಸ್ ತಂಡಗಳಿಂದ ಆಕರ್ಷಕ ಪಥ ಸಂಚಲನ ಏರ್ಪಡಿಸುವಂತೆ ಹಾಗೂ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಕಾರ್ಯಕ್ರಮವನ್ನು ವ್ಯವಸ್ಥಿತವಾಗಿ ಆಯೋಜಿಸುವ ನಿಟ್ಟಿನಲ್ಲಿ ವಿವಿಧ ಅಧಿಕಾರಿಗಳ ನೇತೃತ್ವದಲ್ಲಿ ಹಲವು ಸಮಿತಿ ರಚಿಸಲಾಗಿದ್ದು, ಎಲ್ಲಾ ಸಮಿತಿಯ ಸದಸ್ಯರು ತಮ್ಮ ಜವಾಬ್ದಾರಿಯನ್ನು ಅರಿತು ಸಮನ್ವಯದಿಂದ ಯಾವುದೇ ಲೋಪವಾಗದಂತೆ ಎಚ್ಚರಿಕೆಯಿಂದ ಕಾರ್ಯನಿರ್ವಹಿಸುವಂತೆ ಹಾಗೂ ಗಣರಾಜ್ಯೋತ್ಸವ ಕಾರ್ಯಕ್ರಮದ ಅಂಗವಾಗಿ ಎಲ್ಲಾ ಸರ್ಕಾರಿ ಕಚೇರಿಗಳನ್ನು ವಿದ್ಯುತ್ ದೀಪಾಲಂಕಾರ ಮಾಡುವಂತೆ ಮತ್ತು ಕ್ರೀಡಾಂಗಣದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಎಲ್ಲಾ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಕಡ್ಡಾಯವಾಗಿ ಭಾಗವಹಿಸುವಂತೆ ಸೂಚಿಸಿದರು. ಅಂದು ಬೆಳಿಗ್ಗೆ 9 ಗಂಟೆಗೆ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ವೈದ್ಯಕೀಯ ಶಿಕ್ಷಣ **(2ನೇ ಪುಟಕ್ಕೆ**>>>)

## ಮೊದಲನೇಯ ಪುಟದಿಂದ

# ಗಣರಾಜ್ಯೋತ್ಸವಕ್ಕೆ ಅಗತ್ಯ ಸಿದ್ಧತೆಯಾಗಲಿ ಅಪರ ಜಿಲ್ಲಾಧಿಕಾರಿ ಶಿವಾನಂದ ಸೂಚನೆ

ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ರಾಷ್ಟ್ರ ಧ್ವಜಾರೋಹಣ ನೆರವೇರಿಸಲಿದ್ದು, ಆಕರ್ಷಕ ಪಥಸಂಚಲನ ನಡೆಯಲಿದೆ. ಶಾಲಾ ವಿದ್ಯಾರ್ಥಿಗಳಿಂದ ಸಾಮೂಹಿಕ ನೃತ್ಯ ಕಾರ್ಯಕ್ರಮ ನಡೆಯಲಿದ್ದು, ಸಂಜೆ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿವೆ ಎಂದರು.

ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಧ್ವಜಾರೋಹಣ: ಗಣರಾಜ್ಯೋತ್ಸವ ಅಂಗವಾಗಿ ಜ.26ರಂದು ಜಿಲ್ಲೆಯ ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಧ್ವಜಾರೋಹಣ ನೆರವೇರಿಸಬೇಕು. ಈ ಕುರಿತು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಜವಾಬ್ದಾರಿ ವಹಿಸಿಕೊಳ್ಳಬೇಕು. ಅಲ್ಲದೆ ಜಿಲ್ಲಾ ಕ್ರಿಡಾಂಗಣದಲ್ಲಿ ಧ್ವಜಾರೋಹಣ ಕಾರ್ಯಕ್ರಮಕ್ಕಾಗಿ ಶಾಮಿಯಾನ, ಮೈಕ್ ಸೆಟ್, ಆಸನ ವ್ಯವಸ್ಥೆ, ಫ್ಲೆಕ್ಸ್ ಬ್ಯಾನರ್ ವ್ಯವಸ್ಥೆ ಮಾಡಬೇಕು ಎಂದರು.

ತೋಟಗಾರಿಕೆ ಇಲಾಖೆಯಿಂದ ಧ್ವಜಾರೋಹಣ ಕಾರ್ಯಕ್ರಮಕ್ಕೆ ಹೂವಿನ ಪಾಟ್‌ನೊಂದಿಗೆ ಅಲಂಕರಿಸಬೇಕು. ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆಯು ರಂಗೋಲಿ, ಪತ್ರಿಕಾಗೋಷ್ಠಿಗೆ ಸ್ಥಳವಕಾಶ ಹಾಗೂ ಇನ್ನಿತರ ವ್ಯವಸ್ಥೆ ಮಾಡಬೇಕು ಎಂದರು.

ಗಣರಾಜ್ಯೋತ್ಸವ ಕಾರ್ಯಕ್ರಮದ ಫರೇಡ್ ಪೂರ್ವಭಾವಿ ತಯಾರಿಗೆ ಆಗಮಿಸುವ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ, ಪೊಲೀಸ್ ಮತ್ತು ಇತರೆ ಸಿಬ್ಬಂದಿಗೆ ಉಪಹಾರ ಹಾಗೂ ಚಹಾದ ವ್ಯವಸ್ಥೆ ಮತ್ತು ಕುಡಿಯುವ ನೀರಿನ ವ್ಯವಸ್ಥೆಯನ್ನು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಮಾಡಬೇಕೆಂದು ಸೂಚಿಸಿದರು.

ಇದೇ ಸಂದರ್ಭದಲ್ಲಿ ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ, ಅಬಕಾರಿ ಇಲಾಖೆಯ ಉಪ ಆಯುಕ್ತರಾದ ಮಹೇಂದ್ರ ಕುಮಾರ್, ರಾಯಚೂರು ಸಹಾಯಕ ಆಯುಕ್ತರ ಕಚೇರಿಯ ತಹಶೀಲ್ದಾರ್ ರಾಜಶೇಖರ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರಾದ ನಜೀರ್ ಅಹ್ಮದ್, ತೋಟಗಾರಿಕೆ ಇಲಾಖೆಯ ಉಪ ನಿರ್ದೇಶಕರಾದ ಮಹಮದ್ ಅಲಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವಿರೇಶ ನಾಯಕ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಸುನೀತಾ ಕಾಂಬಳೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ, ಭಾರತ ಸೇವಾ ದಳದ ವಿದ್ಯಾ ಸಾಗರ್ ಸೇರಿದಂತೆ ಜಿಲ್ಲಾಧಿಕಾರಿಗಳ ಕಚೇರಿಯ ಸಿಬ್ಬಂದಿ ವೇಣುಮಾಧವ್, ಮಲ್ಲೇಶ ಇದ್ದರು.

# ಮಳೆ ನಿಂತರೂ ಈಡೇರದ ಸೇತುವೆ ಭರವಸೆ

ಕುಷ್ಟಗಿ,ಜ.09–ಮಳೆ ಮತ್ತು ತಾತ್ಕಾಲಿಕ ರಸ್ತೆಯ ಕಾರಣಗಳನ್ನೇ ನೀಡುತ್ತಾ ಬಂದ ಲೋಕೋಪಯೋಗಿ ಇಲಾಖೆ ಅಧಿಕಾರಿಗಳು,ಜನಪ್ರತಿನಿಧಿಗಳು ಹಳೆಯ ಸೇತುವೆ ಕಿತ್ತು ಎರಡು ತಿಂಗಳ ಕಳೆದರು ಹೊಸ ಸೇತುವೆ ನಿರ್ಮಾಣಕ್ಕೆ ಮುಂದಾಗಿಲ್ಲ.

ಮುದೇನೂರು ಸಮೀಪದ ದೋಟಿಹಾಳ ಗ್ರಾಮದ ಚಿಕ್ಕಹಳ್ಳಕ್ಕೆ ಸೇತುವೆ ನಿರ್ಮಾಣ ಕಾಮಗಾರಿ ಎರಡು ತಿಂಗಳಿಂದ ನನೆಗುದಿಗೆ ಬಿದ್ದ ಪರಿಣಾಮವಾಗಿ ವಾಹನ ಸವಾರರು ಜೀವ ಭಯದಲ್ಲಿ ವಾಹನ ಸವಾರಿ ಮಾಡುವ ಸ್ಥಿತಿ ಎದುರಾಗಿದೆ.

ದೋಟಿಹಾಳ–ಮುದೇನೂರು ಮಾರ್ಗವಾಗಿ ರಾಯಚೂರ,ಭಾಗಲಕೋಟೆ,ಕೊಪ್ಪಳ ಮೂರು ಜಿಲ್ಲೆಗಳಿಗೆ ಸಂಪರ್ಕಿಸಲು ಈ ರಸ್ತೆ ಪ್ರಮುಖವಾಗಿದೆ.ರಾಷ್ಟ್ರೀಯ ಹೆದ್ದಾರಿ 50ರ ಈ ಭಾಗಕ್ಕೂ ಇದೇ ರಸ್ತೆಯಲ್ಲಿಯೇ ಸಂಪರ್ಕ ಕಲ್ಪಿಸುತ್ತದೆ.ಮತ್ತು ಈ ಭಾಗದ ಪ್ರಸಿದ್ಧಿ ಶ್ರೀ ಅವಧೂತ ಶುಖಮುನಿಸ್ವಾಮಿ ದೇವಸ್ಥಾನ,ಶ್ರೀ ಚಂದ್ರಶೇಖರಸ್ವಾಮಿ,ಅಂಕಲಿಮಠ,ಗುಡದೂರಿನ ದೊಡ್ಡಬಸವಾರ್ಯ ತಾತನವರಂತ ಪುಣ್ಯಕ್ಷೇತ್ರಗಳಿಗೆ ಈ ಸೇತುವೆ ಮೂಲಕ ತೆರಳಬೇಕಿದೆ.ಆದರೆ ಕಳೆದ ಎರಡು ವರ್ಷಗಳಿಂದ ಹಾಳಾಗಿದ್ದ ಸೇತುವೆ ಪರಿಣಾಮದಿಂದ ಪುಣ್ಯಕ್ಷೇತ್ರಗಳಿಗೆ ತೆರಳುವ ಭಕ್ತರಿಗೆ ಸುಲಭ ದರ್ಶನ ಭಾಗ್ಯವಿಲ್ಲದಂತಾಗಿದೆ.

ಜನರ ಹಾಗೂ ಭಕ್ತರ ಸುಗಮ ಸಂಚಾರ ಕಲ್ಪಿಸುವ ಉದ್ದೇಶದಿಂದ ಕೆಕೆಆರ್‌ಡಿಬಿ ಯೋಜನೆಯಡಿ 1ಕೋಟಿ ರೂ.ವೆಚ್ಚದಲ್ಲಿ ಸೇತುವೆ ನಿರ್ಮಾಣಕ್ಕೆ ಶಾಸಕ ದೊಡ್ಡನಗೌಡ ಎಚ್.ಪಾಟೀಲ್ ಅವರು ಹಣ ಮಂಜೂರು ಮಾಡಿದ್ದಾರೆ.ಆದರೆ ಲೋಕೋಪಯೋಗಿ ಇಲಾಖೆ,ಗುತ್ತೇದಾರರ ಮಳೆ ,ತಾತ್ಕಾಲಿಕ ರಸ್ತೆ,ಡಿಸೈನ್ ಕಾರಣ ನಿರ್ಲಕ್ಷ್ಯದಿಂದ ಕಳೆದ ಎರಡು ತಿಂಗಳಿಂದ ಸೇತುವೆ ನಿರ್ಮಾಣ ಕಾಮಗಾರಿ ನನೆಗುದಿಗೆ ಬಿದ್ದಿದೆ.

ಫೆಬ್ರುವರಿ ತಿಂಗಳಲ್ಲಿ ದೋಟಿಹಾಳ ಶ್ರೀ ಅವಧುತ ಶುಕಮುನಿಸ್ವಾಮಿ ಹಾಗೂ ಮುದೇನೂರು ಶ್ರೀ ಚಂದ್ರಶೇಖರಸ್ವಾಮಿ ಜಾತ್ರೆ ಇವೆ.ಈ ಜಾತ್ರೆಗೆ ಸಾವಿರಾರು ಭಕ್ತರ ದಂಡು ಹರಿದು ಬರುತ್ತದೆ ಆದರೆ ಅವರಿಗೆ ಸುಸಜ್ಜಿತವಾದ ಸೇತುವೆ ಹಾಗೂ ರಸ್ತೆ ಸೌಲಭ್ಯ ಇಲ್ಲದೆ ಸಮಸ್ಯೆ ಎದುರಿಸಬೇಕಿದೆ.

ಇನ್ನಾದರೂ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು,ಈ ಕ್ಷೇತ್ರದ ಶಾಸಕರು ಎಚ್ಚೆತ್ತುಕೊಂಡು ಸೇತುವೆ ಕಾಮಗಾರಿ ತ್ವರಿತಗತಿಯಲ್ಲಿ ಮುಗಿಸಬೇಕು ಎಂದು ಭಾಗದ ಜನರು ಆಗ್ರಹಿಸಿದ್ದಾರೆ.



ಇಲಾಖೆ ಅಧಿಕಾರಿಗಳು,ಗುತ್ತೇದಾರರು ಮಳೆಗಾಲ ಇದೆ ,ರಸ್ತೆ ಸಮಸ್ಯೆ ಇದೆ ಎಂದು 6ತಿಂಗಳ ಕಾಲಹರಣ ಮಾಡಿದ್ದಾರೆ.ಆದರೆ ಈಗ ಯಾವುದೇ ಸಮಸ್ಯೆ ಇಲ್ಲ.ಮುಂದಿನ ತಿಂಗಳು ಈ ಭಾಗದ ಪುಣ್ಯಕ್ಷೇತ್ರಗಳ ಎರಡು ದೊಡ್ಡ ಜಾತ್ರೆಗಳು ಇವೆ.ಜನರ ಸುಗಮ ಸಂಚಾರದ ಹಿತ ದೃಷ್ಟಿಯಿಂದ ಸೇತುವೆ ಪೂರ್ಣಗೊಳಿಸಬೇಕು.ಶಾಸಕರು ಈ ಬಗ್ಗೆ ಹೆಚ್ಚಿನ ಕಾಳಜಿ ತೋರಿಸಬೇಕು.

–ಅಜೀಜ್ ಕೊಣ್ಣೂರ,ಗ್ರಾ.ಪಂ.ಸದಸ್ಯ ದೋಟಿಹಾಳ

ಹಳೆ ಸೇತುವೆ ಕಿತ್ತು ಒಂದು ತಿಂಗಳ ಹೆಚ್ಚಾಗಿದೆ.ಸೇತುವೆ ಡಿಸೈನ್ ಅಪ್ರೂವಲ್‌ಗೆ ಕಳುಹಿಸಲಾಗಿದೆ.ಡಿಸೈನ್ ಬಂದ ಬಳಿಕ ಕಾಮಗಾರಿ ಪ್ರಾರಂಭಿಸಲಾಗುತ್ತದೆ.

–ಸುಧಾಕರ್ ಕಾತರಕಿ,ಎಇಇ,ಲೋಕೋಪಯೋಗಿ ಇಲಾಖೆ,ಕುಷ್ಟಗಿ

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111, 9743496111

# ಮಹಾಯೋಗಿ ವೇಮನ ಜಯಂತಿ ಆಚರಣೆಗೆ ಸಿದ್ಧತೆ ಕೈಗೊಳ್ಳಿ: ತಹಶೀಲ್ದಾರ್ ಜಗದೀಶ್

ಯುವಮಾರ್ಗ ಸುದ್ದಿ



**ರಾಯಚೂರು,ಜ.09–** ಸರ್ಕಾರದ ಮಾರ್ಗಸೂಚಿ ಅನ್ವಯ ಮಹಾಯೋಗಿ ವೇಮನ ಅವರ ಜಯಂತಿಯನ್ನು ಜನವರಿ 19ರಂದು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿ ರದಲ್ಲಿ ಅರ್ಥಪೂರ್ಣ ಆಚರಣೆಗೆ ಸಂಬಂಧಿಸಿದ ಅಧಿಕಾರಿಗಳು ಅಗತ್ಯ ಸಿದ್ಧತೆಗೆ ಕ್ರಮವಹಿಸಬೇಕ 'ಂದು ಜಿಲ್ಲಾಧಿಕಾರಿಗಳ ಕಚೇರಿಯ ತಹಶೀಲ್ದಾರ್ ಜಗದೀಶ್ ಅವರು ಹೇಳಿದರು.

ಜನವರಿ 07ರ ಬುಧವಾರ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಹಾಯಕ ಆಯುಕ್ತರ ಸಭಾಂಗಣದಲ್ಲಿ ನಡೆದ ಮಹಾಯೋಗಿ ವೇಮನ ಜಯಂತಿ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜ.19ರಂದು ಮಹಾಯೋಗಿ ವೇಮನ ಜಯಂತಿಯ ವೇದಿಕೆಯ ಕಾರ್ಯಕ್ರಮಕ್ಕೆ ಸಮಾಜದ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಅವರು ಮನವಿ ಮಾಡಿದರು. ಅಲ್ಲದೆ ಎಲ್ಲ ಸರಕಾರಿ ಕಚೇರಿಗಳಲ್ಲಿ, ಶಾಲಾ–ಕಾಲೇಜುಗಳಲ್ಲಿ ಕಡ್ಡಾಯವಾಗಿ ಜಯಂತಿ ಆಚರಿಸಬೇಕು ಎಂದು ಸೂಚನೆ ನೀಡಿದರು.

ವೇದಿಕೆಯ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸಕ್ಕೆ ಏರ್ಪಾಡು ಮಾಡಬೇಕು. ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಮಾಡುವುದರ ಜತೆಗೆ ಸ್ವಚ್ಛತೆ ಮತ್ತು ನೈರ್ಮಲ್ಯ ಕಾಪಾಡಬೇಕು. ಅಲ್ಲದೆ ಶಿಷ್ಟಾಚಾರಂತೆ ಆಹ್ವಾನ ಪತ್ರಿಕೆ ಮುದ್ರಿಸಿ ಗಣ್ಯರಿಗೆ ವಿತರಿಸಬೇಕು. ಅಂದು ರಂಗಮಂದಿರದ ಆವರಣದಲ್ಲಿ ಕುಡಿಯುವ ನೀರು ಸೇರಿದಂತೆ ಎಲ್ಲಾ ಅಗತ್ಯ ಏರ್ಪಾಡು ಮಾಡಬೇಕು ಎಂದರು.

ಇದೇ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ, ಸಮಾಜದ ಮುಖಂಡರಾದ ವೀರ ಶೇಖರರೆಡ್ಡಿ, ರಾಮಚಂದ್ರ ರೆಡ್ಡಿ, ಎಮ್.ನರಸಿಂಹ ರೆಡ್ಡಿ, ಭೀಮರೆಡ್ಡಿ ಸರ್ಜಾಪುರ, ಹರಿಚಂದ್ರ ರೆಡ್ಡಿ ಯರಗೇರಾ, ವೀರ ಪ್ರತಾಪ್ ರೆಡ್ಡಿ ಯದ್ಲಾಪುರ್, ಜಿಲ್ಲಾಧಿಕಾರಿಗಳ ಕಚೇರಿಯ ಸಿಬ್ಬಂದಿ ವೇಣುಮಾಧವ್, ಮಲ್ಲೇಶ ಸೇರಿದಂತೆ ಇತರರು ಇದ್ದರು.

# ಸಾಧಕ ಕ್ರೀಡಾಪಟುಗಳಿಗೆ ಗೌರವ ಸನ್ಮಾನ



ಯುವಮಾರ್ಗ ಸುದ್ದಿ

**ರಾಯಚೂರು,ಜ.09–**2025–26ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಯಿಂದ ರಾಷ್ಟ್ರ ಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸಿ ಸಾಧನೆ ತೋರಿದ ಕ್ರೀಡಾಪಟುಗಳಿಗೆ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಜನವರಿ 8ರಂದು ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಸಹಯೋಗದಲ್ಲಿ ನಡೆದ ಎರಡು ದಿನದ ಜಿಲ್ಲಾ ಮಟ್ಟದ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಯಲ್ಲಿ ಸನ್ಮಾನಿಸಿ ಗೌರವಿಸಲಾಯಿತು.

ಪುಟ್‌ಬಾಲ್ ಕ್ರೀಡೆಯಲ್ಲಿ ಲಯನ್ಸ್ ಶಾಲೆಯ ವಿದ್ಯಾರ್ಥಿನಿಯರಾದ ಮುಸ್ಕಾನ ಕುಮಾರಿ, ಸಮನ್ವಿ ಎ.ಪಾಟೀಲ್, ಅಮೃತಾ, ವೈಷ್ಣವಿ ಲಂಬಾಣಿ, ಗುಂಡು ಎಸೆತ ಕ್ರೀಡೆಯಲ್ಲಿ ಸಿರವಾರದ ಶಾಂತಿನಿಕೇತನ ಶಾಲೆಯ ವಿದ್ಯಾರ್ಥಿ ಮಲ್ಲಿಕಾರ್ಜುನ ಹಾಗೂ ಪುಟ್‌ಬಾಲ್ ಕ್ರೀಡೆಯಲ್ಲಿ ರಾಯಚೂರು ತಾಲೂಕಿನ ಡಿ.ಯದ್ಲಾಪೂರು ಶಾಲೆಯ ವಿದ್ಯಾರ್ಥಿನಿ ಗೌರಮ್ಮ ಅವರಿಗೆ ಸನ್ಮಾನಿಸಿ ಗೌರವಿಸಲಾಯಿತು.

# ನಾಳೆ ಜಟಾಯು ಕಣ್ಣು ಕನ್ನಡ ದಿನಪತ್ರಿಕೆ ಲೋಕಾರ್ಪಣೆ ಕಾರ್ಯಕ್ರಮ

ಯುವಮಾರ್ಗ ಸುದ್ದಿ



**ಮಾನ್ವಿ,ಜ.09–** ಪಟ್ಟಣದ ತಾಲೂಕು ಪಂಚಾಯತಿ ಸಭಾಂಗಣದಲ್ಲಿ ಜ.11ರಂದು ಬೆಳಿಗ್ಗೆ 11ಕ್ಕೆ ಜಟಾಯು ಕಣ್ಣು ಕನ್ನಡ ದಿನಪತ್ರಿಕೆಯ ಲೋಕಾರ್ಪಣೆ ಕಾರ್ಯಕ್ರಮವನ್ನು ಸಚಿವ ಎನ್.ಎಸ್.ಬೋಸರಾಜು ಉದ್ಘಾಟಿಸಲಿದ್ದಾರೆ, ಮಾಜಿ ಸಚಿವರಾದ ಕೆ.ಶಿವನಗೌಡ ನಾಯಕರಿಂದ ಜಟಾಯು ಕಣ್ಣು ಕನ್ನಡ ದಿನ ಪತ್ರಿಕೆಯ ಲೋಕಾರ್ಪಣೆ.ಶಾಸಕ ಹಂಪಯ್ಯನಾಯಕರಿಂದ ವಿಜಯ ಕರ್ನಾಟಕ ರಕ್ಷಣಾ ವೇದಿಕೆಯ ಜಿಲ್ಲಾ ಹಾಗೂ ತಾಲೂಕು ಘಟಕದ ಪದಾಧಿಕಾರಿಗಳಿಗೆ ಗುರುತಿನ ಚೀಟಿ ವಿತರಣೆ, ಒಂದು ಲಕ್ಷ ರೂಪಾಯಿ ಜೀವವಿಮಾ ಬಾಂಡ್ ವಿತರಣೆ. ರಾಯಚೂರು ಶಾಸಕ ಡಾ.ಎಸ್.ಶಿವರಾಜ ಪಾಟೀಲ್ ರಿಂದ ಮಹಿಳೆಯರು ಮತ್ತು ಕಾರ್ಮಿಕರ ಸಹಾಯವಾಣಿ ಆರಂಭ, ಮಾಜಿ ಸಂಸದ ಬಿ.ವಿ.ನಾಯಕರಿಂದ ಮಹಿಳೆಯರಿಗೆ ಉಚಿತವಾಗಿ ಹೊಲಿಗೆ ಯಂತ್ರ ವಿತರಣೆ, ಸಂಘಟನೆಯ ಯೂಟ್ಯೂಬ್ ಚಾನಲ್‌ಗೆ ಚಾಲನೆ ನೀಡಲಿದ್ದಾರೆ. ಕಾರ್ಯಕ್ರಮದಲ್ಲಿ ಮಾಜಿ ಶಾಸಕರಾದ ಬಸವನಗೌಡ ಬ್ಯಾಗವಾಟ್, ರಾಜಾ ವೆಂಕಟಪ್ಪನಾಯಕ, ಸೇರಿದಂತೆ ಜಿಲ್ಲೆಯ ಗಣ್ಯರು ಭಾಗವಹಿಸಲಿದ್ದಾರೆ ಎಂದು ವಿಜಯ ಕರ್ನಾಟಕ ರಕ್ಷಣಾ ವೇದಿಕೆಯ ಜಿಲ್ಲಾ ಕಾರ್ಯಧ್ಯಕ್ಷರಾದ ಆನಂದ ಸ್ವಾಮಿ ಹಿರೇಮಠ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಸತಿ ಶಾಲೆಗಳಲ್ಲಿ ಸಂಗೀತ ಶಿಕ್ಷಕರ ನೇಮಕಾತಿಗೆ ಆಗ್ರಹಿಸಿ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗೆ ಮನವಿ



ಯುವಮಾರ್ಗ ಸುದ್ದಿ

**ಬೆಂಗಳೂರು,ಜ.09–** ರಾಜ್ಯದ ಸಮಾಜ ಕಲ್ಯಾಣ ಇಲಾಖೆಯ ವಸತಿ ಶಾಲೆಗಳಲ್ಲಿ ಕಳೆದ 15 ವರ್ಷಗಳಿಂದ ಸಂಗೀತ ಶಿಕ್ಷಕರ ನೇಮಕಾತಿ ನಡೆಯದಿರುವ ಹಿನ್ನೆಲೆಯಲ್ಲಿ, ಕೂಡಲೇ ನೇಮಕಾತಿ ಪ್ರಕ್ರಿಯೆ ಆರಂಭಿಸುವಂತೆ ಒತ್ತಾಯಿಸಿ ನವ ಕರ್ನಾಟಕ ಸಂಗೀತ ಪದವೀಧರ ಸಂಘದ ನಿಯೋಗವು ಇಲಾಖೆಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಶ್ರೀ ಕಾಂತರಾಜು ಪಿ. ಎಸ್. ಅವರಿಗೆ ಮನವಿ ಸಲ್ಲಿಸಿತು.

ಬೆಂಗಳೂರಿನಲ್ಲಿ ಅಧಿಕಾರಿಯನ್ನು ಭೇಟಿ ಮಾಡಿದ ನಿಯೋಗವು, ಹಳೆಯ ವಸತಿ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವುದರ ಜೊತೆಗೆ ಹೊಸದಾಗಿ ಆರಂಭವಾಗಿರುವ ಶಾಲೆಗಳಲ್ಲಿಯೂ ಸಂಗೀತ ಶಿಕ್ಷಕರನ್ನು ನೇಮಕ ಮಾಡಿಕೊಳ್ಳುವ ಅಗತ್ಯದ ಬಗ್ಗೆ ಸುದೀರ್ಘವಾಗಿ ಚರ್ಚಿಸಿತು. ಈ ವೇಳೆ ಪದವೀಧರರ ಅಹವಾಲುಗಳನ್ನು ಆಲಿಸಿದ ಅಧಿಕಾರಿಗಳು, ಹಿಂದಿನ ನೇಮಕಾತಿಗಳ ಮಾಹಿತಿ ಹಾಗೂ ಸದ್ಯ ಲಭ್ಯವಿರುವ ಖಾಲಿ ಹುದ್ದೆಗಳ ಸಂಪೂರ್ಣ ವಿವರವನ್ನು ಪಡೆದುಕೊಂಡು ಮುಂದಿನ ದಿನಗಳಲ್ಲಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಸಂಘದ ರಾಜ್ಯಾಧ್ಯಕ್ಷರಾದ ಬಂಡಯ್ಯ ಹಿರೇಮಠ ಸುಂಟನೂರ ಹಾಗೂ ಪ್ರಮುಖರಾದ ಸತ್ಯವತಿ ದೇಶಪಾಂಡೆ, ಪ್ರಭು ಶಂಕರ ದಾವಣಗೆರೆ, ಶ್ರೀಶೈಲ್ ಬಿರಾದಾರ, ಮಂಜುನಾಥ್ ಸ್ವಾಮಿ, ಶಂಕರ ಹಿರೇಮಠ, ಸಂತೋಷ ಹೂಗಾರ್, ಶೇಖರ್ ಗಲಗ, ರಹಿಮನ್ ಸಾಬ್ ನದಾಫ್, ರಕ್ಷಿತ್ ದಾವಣಗೆರೆ ಸೇರಿದಂತೆ ಅನೇಕ ಸಂಗೀತ ಪದವೀಧರರು ಹಾಜರಿದ್ದರು.

ಯುವ ಮಾರ್ಗ www.yuvamarga.com Yuva Marga yuva_marga_

# ಫೇಸ್ ರಿಕಾಗ್ನೈಜೇಶನ್ ಮೂಲಕ ಪೌಷ್ಠಿಕ ಆಹಾರ ವಿತರಣೆ

**ರಾಯಚೂರು,ಜ.09–**ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಅಂಗವಾಡಿ ಕೇಂದ್ರದ ಫಲಾನುಭವಿಗಳಿಗೆ ಒದಗಿಸುವ ಇಲಾಖಾ ಸೇವಾ ಸೌಲಭ್ಯಗಳಲ್ಲಿ ಅರ್ಹ ಫಲಾನುಭವಿಗಳಾದ ಗರ್ಭಿಣಿ, ಬಾಣಂತಿ, 03 ವರ್ಷದೊಳಗಿನ ಮಕ್ಕಳಿಗೆ ಹಾಗೂ ಕಿಶೋರಿಯರಿಗೆ ಫೇಸ್ ರಿಕಾಗ್ನೈಜೇಶನ್ ಸಿಸ್ಟಂ ಮೂಲಕ ಪೂರಕ ಪೌಷ್ಠಿಕ ಆಹಾರ ವಿತರಣೆ ಮಾಡಲಾಗುತ್ತಿದೆ. ಇದಕ್ಕಾಗಿ ಭಾರತ ಸರಕಾರವು ಪೋಷಣ್ ಟ್ರಾ ಕರ್ ಎನ್ನುವ ತಂತ್ರಾಂಶ ಜಾರಿ ತಂದಿದ್ದು ಅರ್ಹ ಫಲಾನುಭವಿಗಳಿಗಷ್ಟೆ ಸೌಲಭ್ಯ ದೊರೆಯುವಂತೆ, ಬೇರೆ ಯಾವುದೇ ರೀತಿಯಲ್ಲಿ ಅವ್ಯವಹಾರವಾಗದಂತೆ ನೋಡಿಕೊಳ್ಳಲು ಓಟಿಪಿಯ ಮುಖಾಂತರವೇ ಸೇವೆಯನ್ನು ಒದಗಿಸಲಾಗುತ್ತಿದೆ. ನಕಲಿ ಫಲಾನುಭವಿಗಳ ತಡೆಗೆ ಫೇಸ್ ರಿಕಾಗ್ನೈಜೇಶನ್ ಸಿಸ್ಟಂ ಸಹಕಾರಿಯಾಗಿದೆ.

ಒಬ್ಬ ಅರ್ಹ ಫಲಾನುಭವಿ ಪೂರಕ ಪೌಷ್ಠಿಕ ಆಹಾರ ಪಡೆಯಬೇಕಾದಲ್ಲಿ ಮೊದಲಿಗೆ "ಆಧಾರ್ ನೋಂದಣಿ ಮಾಡಿಸಬೇಕು. ನಂತರ ಆಧಾರ್ ವೆರಿಫಿಕೇಶನ್ ಆಗುತ್ತದೆ. ಇದಾದನಂತರ ಈ ಫೇಸ್ ರಿಕಾಗ್ನೈಜೇಶನ್ ಸಿಸ್ಟಂ ಮಾಡಲಾಗುತ್ತದೆ. ನಂತರ ಫಲಾನುಭವಿಯ ಫೇಸ್ ಮ್ಯಾಚ್ ಆಗಬೇಕು. ಈ ಎಲ್ಲಾ ಹಂತಗಳನ್ನು ಪೂರೈಸಿದ ನಂತರವೇ ಅರ್ಹ ಫಲಾನುಭವಿಗಳಿಗೆ ಪೂರಕ ಪೌಷ್ಠಿಕ ಆಹಾರವನ್ನು ವಿತರಣೆ ಮಾಡಲಾಗುವುದು. ಪ್ರತಿ ತಿಂಗಳು 06 ತಿಂಗಳಿಂದ 03 ವರ್ಷದ ಫಲಾನುಭವಿಗಳಿಗೆ ಪೂರಕ ಪೌಷ್ಠಿಕ ಆಹಾರ ವಿತರಣೆಯನ್ನು ಬಾಲವಿಕಾಸ ಸಲಹಾ ಸಮಿತಿಯ ಅಧ್ಯಕ್ಷರು ಹಾಗೂ ಸದಸ್ಯರ ಉಪಸ್ಥಿತಿಯಲ್ಲಿ ಮಾಡಲಾಗುತ್ತದೆ. ಅದೇ ರೀತಿಯಲ್ಲಿ ಅಂಗನವಾಡಿ ಕೇಂದ್ರದ ಫೋಟೋ ಕ್ಯಾಪ್ಚರ್‌ನ್ನು ಸಹ ಮಾಡಲಾಗುತ್ತಿದೆ. ಹೀಗಾಗಿ ಕೇಂದ್ರ ಸರಕಾರದ ಮಹತ್ವಾಕಾಂಕ್ಷೀ ಯೋಜನೆಯನ್ನು ಕರ್ನಾಟಕದಲ್ಲಿ ಕಟ್ಟುನಿಟ್ಟಾಗಿ ಜಾರಿ ಮಾಡಲಾಗಿದೆ ಹಾಗೂ ಪಾರದರ್ಶಕತೆ ತರಲು ಇದು ಸಹಕಾರಿಯಾಗಿದೆ. ಗರ್ಭಿಣಿ, ಬಾಣಂತಿ ಮತ್ತು 06 ವರ್ಷದೊಳಗಿನ ಮಕ್ಕಳ, ಪೌಷ್ಠಿಕ ಆಹಾರ, ಚುಚ್ಚುಮದ್ದು ಮತ್ತು ಆರೋಗ್ಯದ ಕುರಿತು ಪರಿಶೀಲಿಸಲು ಮನೆ ಭೇಟಿ ದಿನಾಂಕಗಳು ಆನ್‌ಲೈನ್‌ನಲ್ಲಿ ತೋರಿಸುತ್ತದೆ. ಈ ದಿನಾಂಕದಂದು ಫಲಾನುಭವಿಗಳನ್ನು ಮನೆ ಭೇಟಿ ಮಾಡಿ ಅಗತ್ಯ ಮಾಹಿತಿ ಮತ್ತು ಸೇವೆಯನ್ನು ಒದಗಿಸುವಲ್ಲಿ ಹೋಮ್ ವಿಜಿಟ್ಸ್ ತುಂಬ ಅನುಕೂಲಕರವಾಗಿದೆ ಎಂದು ರಾಯಚೂರು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ್ವಚ್ಛ ನಗರಕ್ಕಾಗಿ ಮ್ಯಾರಥಾನ್ ಓಟ ಜನವರಿ 12ಕ್ಕೆ

**ರಾಯಚೂರು,ಜ.09–**ರಾಷ್ಟ್ರೀಯ ಯುವ ದಿನದ ಅಂಗವಾಗಿ ಹಾಗೂ ರಾಯಚೂರು ಉತ್ಸವದ ಮಾಹಿತಿ ಜನರಿಗೆ ತಲುಪಿಸುವ ಸಲುವಾಗಿ ಇಲ್ಲಿನ ರಾಯಚೂರು ಮಹಾನಗರ ಪಾಲಿಕೆಯಿಂದ ನಮ್ಮ ಸಂಕಲ್ಪ-ಸುಂದರ, ಹಸಿರು ನಗರ ಎಂಬ ಘೋಷವಾಕ್ಯದೊಂದಿಗೆ ಸ್ವಚ್ಛ ನಗರಕ್ಕಾಗಿ ಓಟ ಎಂಬ ಮ್ಯಾರಥಾನ್ ಕಾರ್ಯಕ್ರಮವನ್ನು ಜನವರಿ 12ರಂದು ಆಯೋಜಿಸಲಾಗಿದೆ.

ನಗರ ಸ್ವಚ್ಛತೆಯ ಕುರಿತು ಜಾಗೃತಿ ಮೂಡಿಸುವ ಉದ್ದೇಶದಿಂದ ಹಮ್ಮಿಕೊಂಡ ಮ್ಯಾರಾಥಾನ್ ಓಟವು ನಗರದ ಮಹಾತ್ಮ ಗಾಂಧಿ ಕ್ರೀಡಾಂಗಣದಿಂದ ಬೆಳಗ್ಗೆ 7 ಗಂಟೆಗೆ ಆರಂಭವಾಗಿ ಬಸವೇಶ್ವರ ವೃತ್ತ, ಜಿಲ್ಲಾಧಿಕಾರಿಗಳ ನಿವಾಸ, ಮಂತ್ರಾಲಯ ಕೆಫೆ, ಕೃಷಿ ವಿಶ್ವವಿದ್ಯಾಲಯ ಗೇಟ್-2ರ ಮಾರ್ಗವಾಗಿ ಸಂಚರಿಸಿ ಮತ್ತೆ ಮಹಾತ್ಮ ಗಾಂಧಿ ಕ್ರೀಡಾಂಗಣದಲ್ಲಿ ಸಮಾರೋಪಗೊಳ್ಳಲಿದೆ.

ಮ್ಯಾರಥಾನ್ ಓಟದ ಮೂಲಕ ಸ್ವಚ್ಛತೆಯಲ್ಲಿ ನಾಗರಿಕರ ಪಾತ್ರ, ಸಾರ್ವಜನಿಕ ಸ್ಥಳಗಳಲ್ಲಿ ಸ್ವಚ್ಛತೆ ಕಾಪಾಡುವ ಅಗತ್ಯತೆ, ಪರಿಸರ ಕಾಳಜಿ, ನಗರ ಸೌಂದರ್ಯ ಹೆಚ್ಚಿಸುವುದು ಹಾಗೂ ಉತ್ತಮ ಆರೋಗ್ಯ ಕಾಪಾಡಿಕೊಳ್ಳುವ ಮಹತ್ವದ ಕುರಿತು ಜನಜಾಗೃತಿ ಮೂಡಿಸಲಾಗುತ್ತದೆ. ಹಾಗೂ ಪಾಲ್ಗೊಂಡ ಅಭ್ಯರ್ಥಿಗಳಿಗೆ ಇ-ಸರ್ಟಿಫಿಕೇಟ್, ಪ್ರಥಮ ರೂ.5000, ದ್ವಿತೀಯ ರೂ.3500 ಮತ್ತು ತೃತೀಯ ರೂ.2500 ಬಹುಮಾನ ನೀಡಲಾಗುವುದು.

ನಗರದ ಶಾಲಾ-ಕಾಲೇಜು ವಿದ್ಯಾರ್ಥಿಗಳು, ಸಂಘ-ಸಂಸ್ಥೆಗಳ ಪದಾಧಿಕಾರಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು, ಕ್ರೀಡಾಪಟುಗಳು ಸೇರಿದಂತೆ ಇಡೀ ನಗರದ ಜನತೆ ಈ ಮ್ಯಾರಥಾನ್‌ನಲ್ಲಿ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು. ಮ್ಯಾರಥಾನ್‌ನಲ್ಲಿ ಭಾಗವಹಿಸಲು ಕ್ಯೂ.ಆರ್.ಕೋಡ್ ಸ್ಕ್ಯಾನ್ ಅಥವಾ ವೆಬ್‌ಸೈಟ್ ವಿಳಾಸ: https://forms.gle/oj58WfBkhCDCJAs17 ನಲ್ಲಿ ಮಾಡಿ ಇಂದೇ ನೋಂದಣಿ ಮಾಡಿಕೊಳ್ಳಬಹುದಾಗಿದೆಂದು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಪೂರ್ಣ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಪುನಃ ಅರ್ಜಿ ಸಲ್ಲಿಸಲು ಜ.15ರವರೆಗೆ ಕಾಲಾವಕಾಶ

**ರಾಯಚೂರು,ಜ.09–** ರಾಯಚೂರು ಜಿಲ್ಲೆಯ 08 ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿನ ವಿವಿಧ ಗ್ರಾಮ ಪಂಚಾಯತಿ, ಪಟ್ಟಣ ಪಂಚಾಯತಿ, ಪುರಸಭೆ, ನಗರ ಸಭೆ ವ್ಯಾಪ್ತಿಯಲ್ಲಿ ಖಾಲಿ ಇರುವ ಒಟ್ಟು 71 ಅಂಗನವಾಡಿ ಕಾರ್ಯಕರ್ತೆಯರು ಹಾಗೂ 269 ಅಂಗನವಾಡಿ ಸಹಾಯಕಿಯರ ಗೌರವಸೇವೆ ಹುದ್ದೆಗಳಿಗೆ ದಿನಾಂಕ: 08-12-2025 ರಿಂದ 07-01-2026ರವರೆಗೆ ಅರ್ಜಿ ಸಲ್ಲಿಸಲು ಕಾಲಾವಕಾಶ ನೀಡಲಾಗಿರುತ್ತದೆ. ಪ್ರಸ್ತುತ ಅರ್ಜಿ ಸಲ್ಲಿಸುವ ಕಾಲಾವಧಿ ಮುಗಿದಿದ್ದು, ಅರ್ಜಿ ಸಲ್ಲಿಸುವಾಗ ವೆಬ್‌ಸೈಟನಲ್ಲಿ ಒಟ್ಟು 4 ವಿವಿಧ ಹಂತಗಳಿದ್ದು, ಇದರಲ್ಲಿ ಕೆಲವರಿಗೆ 01ನೇ ಹಂತದಲ್ಲಿ ಅಪ್ಲಿಕೇಶನ್ ಸಕ್ಸಸಪುಲ್ಲಿ ಅಪಲೋಡೆಡ್ ಎಂಬ ಮೆಸೇಜ್ ಅವರ ಮೊಬೈಲ್‌ಗಳಿಗೆ ಸ್ವೀಕೃತವಾಗಿರುವುದರಿಂದ ಅರ್ಜಿಗಳನ್ನು ಪೂರ್ಣಗೊಳಿಸಿರುವುದಿಲ್ಲ. ಜಿಲ್ಲೆಯಲ್ಲಿ ಅಂಗನವಾಡಿ ಕಾರ್ಯಕರ್ತೆಯರ ಹುದ್ದೆಗೆ 1258 ಅಪೂರ್ಣ ಅರ್ಜಿಗಳು ಹಾಗೂ ಸಹಾಯಕಿಯರ ಹುದ್ದೆಗೆ 840 ಅಪೂರ್ಣ ಅರ್ಜಿಗಳು ಸ್ವೀಕೃತವಾಗಿರುತ್ತವೆ.

ದಿನಾಂಕ: 20-12-2024 ರ ಸರ್ಕಾರದ ಆದೇಶದಲ್ಲಿ ಅರ್ಜಿ ಸಲ್ಲಿಸುವ 4 ಹಂತಗಳನ್ನು ಪೂರ್ಣಗೊಳಿಸದೇ ಅಪೂರ್ಣ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಮಾತ್ರ ದಿನಾಂಕ: 08-01-2026 ರಿಂದ 15-01-2026 ರ ವರೆಗೆ ಅರ್ಜಿಗಳನ್ನು ಪೂರ್ಣಗೊಳಿಸಲು ವೆಬ್‌ಸೈಟನಲ್ಲಿ ಇಲಾಖಾಯಿಂದಲೆ ಅವಕಾಶ ನೀಡಿ ಆದೇಶಿಸಲಾಗಿರುತ್ತದೆ. ಆದ್ದರಿಂದ ಅಪೂರ್ಣ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ ಅರ್ಜಿಗಳನ್ನು ಪೂರ್ಣಗೊಳಿಸಲು ದಿನಾಂಕ: 08-01-2026 ರಿಂದ 15-01-2026 ಸಂಜೆ: 5.30 ರ ವೆರೆಗೆ ಕಾಲಾವಕಾಶ ನಿಗದಿಪಡಿಸಿದೆ. ಅಭ್ಯರ್ಥಿಗಳು ಅರ್ಜಿಯನ್ನು ಈ ಕೆಳಗಿನ 4 ಹಂತಗಳಲ್ಲಿ ಪೂರ್ಣಗೊಳಿಸಬೇಕಾಗಿರುತ್ತದೆ.

ಒಂದನೇ ಹಂತ: ಆನ್ ಲೈನ್ ತಂತ್ರಾಂಶದಲ್ಲಿ ನಿಗದಿತ ಅರ್ಜಿ ನಮೂನೆಯಲ್ಲಿ ಮಾಹಿತಿ ತುಂಬುವುದು. ಎರಡನೇ ಹಂತ: ತಮ್ಮ ಭಾವಚಿತ್ರ ಸಹಿಯನ್ನು ಅಪ್ ಲೋಡ್ ಮಾಡುವುದು. ಮೂರನೇ ಹಂತ: ತಮ್ಮ ದಾಖಲಾತಿಗಳನ್ನು ಅಪ್ ಲೋಡ್ ಮಾಡುವುದು. ನಾಲ್ಕನೆ ಹಂತ: ತಮ್ಮ ಆಧಾರ ಸಂಖ್ಯೆ ನಮೂದಿಸಿ ಇ ಹಸ್ತಾಕ್ಷರದೊಂದಿಗೆ ಅರ್ಜಿಯನ್ನು ಪೂರ್ಣಗೊಳಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಗಳಿಗೆ ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾ.ರಾ.ಗೋವಿಂದು, ಜಯಮಾಲಾಗೆ ಡಾ.ರಾಜ್‌ಕುಮಾರ್ ಪ್ರಶಸ್ತಿ

**ಬೆಂಗಳೂರು, ಜ.9–** ರಾಜ್ಯ ಸರ್ಕಾರದಿಂದ ನೀಡುವ 2020 ಹಾಗೂ 2021ನೇ ಸಾಲಿನ ಪ್ರತಿಷ್ಠಿತ ಡಾ.ರಾಜಕುಮಾರ್, ಪುಟ್ಟಣ್ಣ ಕಣಗಲ್ ಮತ್ತು ಡಾಕ್ಟರ್ ವಿಷ್ಣುವರ್ಧನ್ ಪ್ರಶಸ್ತಿಗಳನ್ನು ಪ್ರಕಟಿಸಲಾಗಿದೆ.2020ರ ಸಾಲಿನ ಡಾ.ರಾಜ್‌ಕುಮಾರ್ ಪ್ರಶಸ್ತಿಯನ್ನು ಹಿರಿಯ ನಟಿ ಡಾ.ಜಯಮಾಲಾ ಅವರಿಗೆ, 2020ರ ಸಾಲಿನ ಪುಟ್ಟಣ್ಣ ಕಣಗಾಲ್ ಪ್ರಶಸ್ತಿಯನ್ನು ಹಿರಿಯ ನಿರ್ದೇಶಕ ಎಂ.ಎಸ್. ಸತ್ಯು ಹಾಗೂ ಪ್ರಗತಿ ಅಶ್ವತ್ ನಾರಾಯಣ್ ಅವರಿಗೆ ಡಾ.ವಿಷ್ಣುವರ್ಧನ ಪ್ರಶಸ್ತಿ ನೀಡಲಾಗಿದೆ.ಅಂತೆಯೇ 2021ರ ಸಾಲಿನ ಡಾ.ರಾಜಕುಮಾರ್ ಪ್ರಶಸ್ತಿಯನ್ನು ಹಿರಿಯ ನಿರ್ಮಾಪಕ ಸಾ.ರಾ.ಗೋವಿಂದ್ ಅವರಿಗೆ ಘೋಷಿಸಲಾಗಿದೆ. 2021ರ ಸಾಲಿನ ಪುಟ್ಟಣ್ಣ ಕಣಗಲ್ ಪ್ರಶಸ್ತಿಯನ್ನು ನಿರ್ದೇಶಕ ಶಿವರುದ್ರಯ್ಯ ಅವರಿಗೆ ನೀಡಲಾಗಿದೆ. ಜೊತೆಗೆ ಹಿರಿಯ ನಟ ಎಂ.ಕೆ.ಸುಂದರ್ ರಾಜ್ ಅವರಿಗೆ 2021 ನೇ ಸಾಲಿನ ವಿಷ್ಣುವರ್ಧನ ಪ್ರಶಸ್ತಿ ಲಭಿಸಿದೆ.ಈ ಎಲ್ಲ ಪ್ರಶಸ್ತಿಗಳು 5 ಲಕ್ಷ ರೂ. ನಗದು ಹಾಗೂ 50 ಗ್ರಾಂ ಚಿನ್ನದ ಪದಕವನ್ನು ಒಳಗೊಂಡಿವೆ.

**2020ನೇ ಸಾಲಿನ ಪ್ರಶಸ್ತಿ** :ಡಾ.ಜಯಮಾಲಾ-ಡಾ.ರಾಜ್ ಕುಮಾರ್ ಪ್ರಶಸ್ತಿಎಂ.ಎಸ್ ಸತ್ಯು-ಪುಟ್ಟಣ್ಣ ಕಣಗಾಲ್‌ಹಿರಿಯ ಸ್ಥಿರ ಛಾಯಾಗ್ರಾಹಕ ಪ್ರಗತಿ ಅಶ್ವತ್ ನಾರಾಯಣ್ ಡಾ.ವಿಷ್ಣುವರ್ಧ ನ್ ಪ್ರಶಸ್ತಿಪ್ರಶಸ್ತಿ ಡಾ.ರಾಜ್‌ಗೆ ಅರ್ಪಣೆ..ರಾಜ್ಯ ಸರ್ಕಾರದಿಂದ ಡಾ.ರಾಜ್‌ಕುಮಾರ್ ಪ್ರಶಸ್ತಿಗೆ ನನ್ನನ್ನು ಆಯ್ಕೆ ಮಾಡಿರುವುದಕ್ಕೆ ಅತೀವ ಸಂತಸವಾಗಿದೆ ಎಂದು ನಿರ್ಮಾಪಕ ಸಾ.ರಾ.ಗೋವಿ ಂದು ಹೇಳಿದ್ದಾರೆ.

ನಾನು ಈ ಪ್ರಶಸ್ತಿಯನ್ನು ಗೌರವ ಪೂರ್ವಕವಾಗಿ ಪದಭೂಷಣ ಡಾ.ರಾಜ್‌ಕುಮಾರ್ ಅವರಿಗೆ ಅರ್ಪಣೆ ಮಾಡುತ್ತೇನೆ ಎಂದು ಅವರು ತಿಳಿಸಿದ್ದಾರೆ.ನಾನು ಪ್ರೀತಿಯಿಂದ ಆರಾಧಿಸುವ, ಅಭಿಮಾನಿಸುವ ದೊಡ್ಡ ವ್ಯಕ್ತಿಯ ಹೆಸರಿನಲ್ಲಿ ನನಗೆ ಪ್ರಶಸ್ತಿ ಬಂದಿರುವುದು ನನ್ನ ಪುಣ್ಯ. ಪ್ರಶಸ್ತಿಗೆ ನನ್ನನ್ನು ಆಯ್ಕೆ ಮಾಡಿರುವುದು ತಿಳಿದು ನನಗಾದ ಸಂತೋಷ ಹೇಳತೀರದು. ಅಣ್ಣಾ ಅವರ ಜೊತೆಯಲ್ಲಿ ನಾನು ಕಳೆದ ಕ್ಷಣಗಳನ್ನು ನೆನೆದು ಕಣ್ಣಿರು ಬಂತು. ಆ ಪುಣ್ಯಾತ ಈಗಲೂ ಅಜರಾಮರ ಎಂದು ಭಾವುಕರಾದರು.

# ಜನವರಿ 10ರಂದು ವಿದ್ಯುತ್ ವ್ಯತ್ಯಯ

**ರಾಯಚೂರು,ಜ.09–** ಇಲ್ಲಿನ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ-02ರ 11ಕೆವಿ ಹೆಚ್ಚುವರಿ ಪರಿವರ್ತಕಗಳ ಕಾಮಗಾರಿ ಕೈಗೊಂಡ ಪ್ರಯುಕ್ತ ಜನವರಿ 10ರ ಬೆಳಿಗ್ಗೆ 11ರಿಂದ ಸಂಜೆ 5ಗಂಟೆವರೆಗೆ ಶಿವಂ ಅಸ್ಪತ್ರೆ, ಮಾಂಗಲ್ಯ ಶಾಪಿಂಗ್ ಮಾಲ್, ಲೋಹಾರ ವಾಡಿ, ಗಾಂಧಿ ಚೌಕ್, ಬಂದಾರ ಗಾಲ್ಲಿ, ಎಂ.ಜಿ.ರಸ್ತೆ, ಹರಿಹರ ರಸ್ತೆ, ಮಕ್ತಲ್ ಪೇಟೆ, ಪಿಂಜರ ವಾಡಿ, ಶರಣಬಸವೇಶ್ವರ ಆಸ್ಪತ್ರೆ, ಬೆಟ್ಟದೂರ ಆಸ್ಪತ್ರೆ, ಪ್ಯಾರೇಸ್ ಗಾರ್ಡನ್, ಕುಂಬಾರ ಓಣಿ, ಮಡ್ಡಿ ಪೇಟೆ, ಬ್ರೆಸ್ತಾವಾರ ಪೇಟೆ, ಚಂದ್ರ ಮೌಳೇಶ್ವರ ಚೌಕ್ ಸೇರಿದಂತೆ ಸುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ.ಹೆಚ್ಚಿನ ಮಾಹಿತಿಗಾಗಿ ಗ್ರಾಹಕರ ನಿರಂತರ ಸೇವಾ ಕೇಂದ್ರದ ದೂರವಾಣಿ ಸಂಖ್ಯೆ: 08532-226386, 08532-231999, 9448395622ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ-02ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕ್ರೀಡಾಕೂಟ, ಸಾಂಸ್ಕೃತಿಕ ಸ್ಪರ್ಧೆಗೆ ಚಾಲನೆ

**ರಾಯಚೂರು,ಜ.09–**ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಸಹಯೋಗದಲ್ಲಿ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಜನವರಿ 8ರಂದು ಆಯೋಜಿಸಿದ್ದ ಎರಡು ದಿನಗಳ ಜಿಲ್ಲಾ ಮಟ್ಟದ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳ ಕಾರ್ಯಕ್ರಮಕ್ಕೆ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಚಾಲನೆ ನೀಡಿದರು.ಪುರುಷರಿಗೆ ಪುಟ್‌ಬಾಲ್, ವಾಲಿಬಾಲ್, ಕಬಡ್ಡಿ, ಕ್ರಿಕೆಟ್, ಬ್ಯಾಸ್ಕೆಟ್‌ಬಾಲ್ ಇತರೆ ಗುಂಪು ಕ್ರೀಡೆಗಳು ಹಾಗೂ ವೈಯಕ್ತಿಕ ಕ್ರೀಡೆಗಳಾದ ಚೆಸ್, ಓಟ, ಈಜು, ಗುಂಡು ಎಸೆತ ಸೇರಿದಂತೆ ಇತರ ಕ್ರೀಡೆಗಳು ಹಾಗೂ ಮಹಿಳೆಯರಿಗೆ ಕಬಡ್ಡಿ, ಬಾಲ್ ಬ್ಯಾಡ್ಮಿಂಟನ್ ಇತರೆ ಗುಂಪು ಕ್ರೀಡೆಗಳ ಜೊತೆಗೆ ವೈಯಕ್ತಿಕ ಕ್ರೀಡೆಗಳಾದ ಚೆಸ್, ರನ್ನಿಂಗ್, ಈಜು, ಗುಂಡು ಎಸೆತ ಸೇರಿದಂತೆ ಇತರೆ ಕ್ರೀಡೆಗಳನ್ನು ಆಯೋಜನೆ ಮಾಡಲಾಗಿದ್ದು, ಜಿಲ್ಲೆಯಿಂದ ಒಟ್ಟು 1,266 ನೌಕರರು ಕ್ರೀಡಾಕೂಟಕ್ಕೆ ನೋಂದಣಿ ಮಾಡಿಸಿಕೊಂಡಿದ್ದಾರೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವಿರೇಶ್ ನಾಯಕ ಅವರು ತಿಳಿಸಿದರು.ಇದಕ್ಕೂ ಮುಂಚೆ, 2025-26 ಸಾಲಿನ ರಾಜ್ಯ ಸರಕಾರಿ ನೌಕರರ ರಾಯಚೂರು ಜಿಲ್ಲಾ ಮಟ್ಟದ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸುತ್ತಿರುವ ನಾವು ಸ್ಪರ್ಧೆಗಳ-ನೀತಿ ಹಾಗೂ ತೀರ್ಪುಗಾರರ ನಿಯಮಗಳಿಗೆ ತೀರ್ಮಾನಕ್ಕೆ ಕ್ರೀಡಾ ಮನೋಭಾವದಿಂದ ಬದ್ಧರಾಗಿ ಕ್ರೀಡೆಗಳ ಹಿರಿಮೆಗಾಗಿ ಭಾಗವಹಿಸಿ ಕ್ರೀಡೆಗಳ ಉನ್ನತಿಗಾಗಿ ಶ್ರಮಿಸುತ್ತೇವೆಂದು ಪ್ರತಿಜ್ಞೆ ಬೋಧಿಸಲಾಯಿತು. ಅಲ್ಲದೆ ಮಹಿಳಾ ಕ್ರೀಡಾಪಟುಗಳಿಂದ ಕ್ರೀಡಾಜ್ಯೋತಿ ನೆರವೇರಿಸಲಾಯಿತು.ಇದೇ ಸಂದರ್ಭದಲ್ಲಿ ರಾಯಚೂರು ಮಹಾನಗರ ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತರಾದ ಸಂತೋಷ ರಾಣಿ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಕೃಷ್ಣ ಶಾವಂತಗೇರಾ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯ ಕಾರ್ಯದರ್ಶಿಗಳಾದ ಡಾ.ಶಂಕರಗೌಡ ಎಸ್.ಪಾಟೀಲ್,ಇದ್ದರು.

# ಫೇಸ್ ರಿಕಾಗ್ನೈಜೇಶನ್ ಮೂಲಕ ಪೌಷ್ಠಿಕ ಆಹಾರ ವಿತರಣೆ

**ರಾಯಚೂರು,ಜ.09–**ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಅಂಗವಾಡಿ ಕೇಂದ್ರದ ಫಲಾನುಭವಿಗಳಿಗೆ ಒದಗಿಸುವ ಇಲಾಖಾ ಸೇವಾ ಸೌಲಭ್ಯಗಳಲ್ಲಿ ಅರ್ಹ ಫಲಾನುಭವಿಗಳಾದ ಗರ್ಭಿಣಿ, ಬಾಣಂತಿ, 03 ವರ್ಷದೊಳಗಿನ ಮಕ್ಕಳಿಗೆ ಹಾಗೂ ಕಿಶೋರಿಯರಿಗೆ ಫೇಸ್ ರಿಕಾಗ್ನೈಜೇಶನ್ ಸಿಸ್ಟಂ ಮೂಲಕ ಪೂರಕ ಪೌಷ್ಠಿಕ ಆಹಾರ ವಿತರಣೆ ಮಾಡಲಾಗುತ್ತಿದೆ. ಇದಕ್ಕಾಗಿ ಭಾರತ ಸರಕಾರವು ಪೋಷಣ್ ಟ್ರಾ ಕರ್ ಎನ್ನುವ ತಂತ್ರಾಂಶ ಜಾರಿ ತಂದಿದ್ದು ಅರ್ಹ ಫಲಾನುಭವಿಗಳಿಗಷ್ಟೆ ಸೌಲಭ್ಯ ದೊರೆಯುವಂತೆ, ಬೇರೆ ಯಾವುದೇ ರೀತಿಯಲ್ಲಿ ಅವ್ಯವಹಾರವಾಗದಂತೆ ನೋಡಿಕೊಳ್ಳಲು ಓಟಿಪಿಯ ಮುಖಾಂತರವೇ ಸೇವೆಯನ್ನು ಒದಗಿಸಲಾಗುತ್ತಿದೆ. ನಕಲಿ ಫಲಾನುಭವಿಗಳ ತಡೆಗೆ ಫೇಸ್ ರಿಕಾಗ್ನೈಜೇಶನ್ ಸಿಸ್ಟಂ ಸಹಕಾರಿಯಾಗಿದೆ.ಒಬ್ಬ ಅರ್ಹ ಫಲಾನುಭವಿ ಪೂರಕ ಪೌಷ್ಠಿಕ ಆಹಾರ ಪಡೆಯಬೇಕಾದಲ್ಲಿ ಮೊದಲಿಗೆ "ಆಧಾರ್ ನೋಂದಣಿ ಮಾಡಿಸಬೇಕು. ನಂತರ ಆಧಾರ್ ವೆರಿಫಿಕೇಶನ್ ಆಗುತ್ತದೆ. ಇದಾದನಂತರ ಈ ಫೇಸ್ ರಿಕಾಗ್ನೈಜೇಶನ್ ಸಿಸ್ಟಂ ಮಾಡಲಾಗುತ್ತದೆ. ನಂತರ ಫಲಾನುಭವಿಯ ಫೇಸ್ ಮ್ಯಾಚ್ ಆಗಬೇಕು. ಈ ಎಲ್ಲಾ ಹಂತಗಳನ್ನು ಪೂರೈಸಿದ ನಂತರವೇ ಅರ್ಹ ಫಲಾನುಭವಿಗಳಿಗೆ ಪೂರಕ ಪೌಷ್ಠಿಕ ಆಹಾರವನ್ನು ವಿತರಣೆ ಮಾಡಲಾಗುವುದು. ಪ್ರತಿ ತಿಂಗಳು 06 ತಿಂಗಳಿಂದ 03 ವರ್ಷದ ಫಲಾನುಭವಿಗಳಿಗೆ ಪೂರಕ ಪೌಷ್ಠಿಕ ಆಹಾರ ವಿತರಣೆಯನ್ನು ಬಾಲವಿಕಾಸ ಸಲಹಾ ಸಮಿತಿಯ ಅಧ್ಯಕ್ಷರು ಹಾಗೂ ಸದಸ್ಯರ ಉಪಸ್ಥಿತಿಯಲ್ಲಿ ಮಾಡಲಾಗುತ್ತದೆ. ಅದೇ ರೀತಿಯಲ್ಲಿ ಅಂಗನವಾಡಿ ಕೇಂದ್ರದ ಫೋಟೋ ಕ್ಯಾಪ್ಚರ್‌ನ್ನು ಸಹ ಮಾಡಲಾಗುತ್ತಿದೆ. ಹೀಗಾಗಿ ಕೇಂದ್ರ ಸರಕಾರದ ಮಹತ್ವಾಕಾಂಕ್ಷೀ ಯೋಜನೆಯನ್ನು ಕರ್ನಾಟಕದಲ್ಲಿ ಕಟ್ಟುನಿಟ್ಟಾಗಿ ಜಾರಿ ಮಾಡಲಾಗಿದೆ ಹಾಗೂ ಪಾರದರ್ಶಕತೆ ತರಲು ಇದು ಸಹಕಾರಿಯಾಗಿದೆ. ಈ ದಿನಾಂಕದಂದು ಫಲಾನುಭವಿಗಳನ್ನು ಮನೆ ಭೇಟಿ ಮಾಡಿ ಅಗತ್ಯ ಮಾಹಿತಿ ಮತ್ತು ಸೇವೆಯನ್ನು ಒದಗಿಸುವಲ್ಲಿ ಹೋಮ್ ವಿಜಿಟ್ಸ್ ತುಂಬ ಅನುಕೂಲಕರವಾಗಿದೆ ಎಂದು ರಾಯಚೂರು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಕ್ತದಾನದ ಮೂಲಕ ಪ್ರಾಣ ಉಳಿಸಲು ಮುಂದಾಗಿ: ಪ್ರೊ ಮುನಿರಾಜು



**ಬಳ್ಳಾರಿ, ಜ.09–** ರಕ್ತದಾನ ಶಿಬಿರವನ್ನು ಆಯೋಜಿಸುವ ಮೂಲಕ ಜೀವವನ್ನು ಉಳಿಸುವ ಕೆಲಸ ಯುವರೆಡ್ ಕ್ರಾಸ್ ಮಾಡುತ್ತಿದೆ ಎಂದು ವಿಜಯನಗರ ಶ್ರೀಕೃಷ್ಣದೇವರಯ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ ಎಂ ಮುನಿರಾಜು ಹೇಳಿದರು.

ವಿಶ್ವವಿದ್ಯಾಲಯದ ಡಾ ಬಿ ಆರ್ ಅಂಬೇಡ್ಕರ್ ಸಭಾಂಗಣದಲ್ಲಿ ಬಳ್ಳಾರಿ ಯುವ ರೆಡ್ ಕ್ರಾಸ್ ಘಟಕ ಹಾಗೂ ವಿಶ್ವ ವಿದ್ಯಾಲಯದ ಅಧೀನದಲ್ಲಿ ಬರುವ ಮಹಾವಿದ್ಯಾಲಯಗಳ ರೆಡ್‌ಕ್ರಾಸ್ ಘಟಕದ ಕಾರ್ಯಕ್ರಮಾಧಿಕಾರಿಗಳಿಗೆ ಒಂದು ದಿನದ ಕಾರ್ಯಾಗಾರವನ್ನು ಆಯೋಜಿಸಲಾಗಿತ್ತು.

ವಿದ್ಯಾರ್ಥಿಗಳು ರಕ್ತದಾನ ಮಾಡುವುದರಿಂದ ವಿಶ್ವ ವಿದ್ಯಾಲಯದ ಕೀರ್ತಿ ಹೆಚ್ಚಾಗುತ್ತದೆ. ಒಬ್ಬ ವ್ಯಕ್ತಿ ಮೂರು ತಿಂಗಳಿಗೊಮ್ಮೆ ರಕ್ತದಾನ ಮಾಡಬಹುದಾಗಿದೆ. ಯುವಕರು ರಕ್ತದಾನ ಮಾಡಲು ಮುಂದಾಗಬೇಕು. ರಕ್ತದಾನದ ಮಾಡುವುದರಿಂದ ಆರೋಗ್ಯಕ್ಕೆ ಹಲವಾರು ಪ್ರಯೋಜನಗಳಿವೆ. ಯುವ ಜನತೆ ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡಿರಿ. ವಿವಿಯ ವ್ಯಾಪ್ತಿಯಲ್ಲಿ ಬರುವ ಕಾಲೇಜುಗಳಲ್ಲಿ ಹೆಚ್ಚು ರಕ್ತದಾನ ಮಾಡುವವರನ್ನು ವಿವಿಯ ವತಿಯಿಂದ ಅತ್ಯುತ್ತಮ ಗೌರವ ಪ್ರಶಸ್ತಿ ನೀಡುವುದಾಗಿ ಹೇಳಿದರು.

ರೆಡ್ ಕ್ರಾಸ್ ಸಂಸ್ಥೆಯ ಜಿಲ್ಲಾ ಕಾರ್ಯದರ್ಶಿ ಎಮ್ ಎ ಶಕೀಬ್ ಮಾತನಾಡಿ, ರೆಡ್ ಕ್ರಾಸ್ ಸಂಸ್ಥೆ ಬೆಳೆದು ಬಂದ ಹಾದಿ ಹಾಗೂ ಅದರ ಪ್ರಾಮುಖ್ಯತೆಯನ್ನು ತಿಳಿಸಿದರು. ಕಾಲಕಾಲಕ್ಕೆ ರಕ್ತದಾನ ಮಾಡುವುದರಿಂದ ಆರೋಗ್ಯ ಸಮತೋಲನವಾಗಿರಲು ಸಹಾಯಕವಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ವಿಶ್ವ ವಿದ್ಯಾಲಯದ ಅಧೀನದಲ್ಲಿ ಬರುವ ಮಹಾವಿದ್ಯಾಲಯಗಳ ರೆಡ್‌ಕ್ರಾಸ್ ಘಟಕದ 100ಕ್ಕು ಹೆಚ್ಚು ಕಾರ್ಯಕ್ರಮಾಧಿಕಾರಿಗಳು ಉಪಸ್ಥಿತರಿದ್ದರು.

ವಿವಿಯ ಯುವ ರೆಡ್ ಕ್ರಾಸ್ ನೋಡಲ್ ಅಧಿಕಾರಿ ಡಾ ರಾಜೇಂದ್ರಪ್ರಸಾದ್ ಪ್ರಾಸ್ತಾವಿಕವಾಗಿ ಮಾತನಾಡಿ, ವಂದಿಸಿದರು. ಮೇಘರಾಜ ಅತಿಥಿಗಳನ್ನು ಸ್ವಾಗತಸಿದರು.

ಕಾರ್ಯಕ್ರಮದಲ್ಲಿ ವಿವಿಯ ವಿವಿಧ ನಿಕಾಯಗಳ ಡೀನರು, ವಿವಿಧ ವಿಭಾಗಗಳ ಮುಖ್ಯಸ್ಥರು, ಸಂಯೋಜಕರು, ಬೋಧಕರು, ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಹಾಜರಿದ್ದರು.

# ವಿಶೇಷ ಲೋಕ ಅದಾಲತ್ ಜನವರಿ 24ಕ್ಕೆ

**ರಾಯಚೂರು,09–**ಕರ್ನಾಟಕ ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ನಿರ್ದೇಶನದ ಮೇರೆಗೆ ಜನವರಿ 24ರಂದು ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಭೂ-ಸ್ವಾಧೀನ ಪ್ರಕರಣಗಳ ಇತ್ಯರ್ಥಕ್ಕಾಗಿ ವಿಶೇಷ ಲೋಕ ಅದಾಲತ್ ಹಮ್ಮಿಕೊಂಡಿದ್ದು, ಕಕ್ಷಿದಾರರು ಇದರ ಸದುಪಯೋಗ ಪಡಿಸಿಕೊಳ್ಳುವಂತೆ ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹೆಚ್.ಎ.ಸಾತ್ವಿಕ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಫೈರಿಂಗ ಘಟನಾ ಸ್ಥಳ ಪರಿಶೀಲನೆ ಮಾಡಿದ ನೂತನ ಡಿಐಜಿಪಿ



**ಬಳ್ಳಾರಿ, ಜ.09–** ನಗರದ ಸಿರುಗುಪ್ಪ ರಸ್ತೆಯ ಜನಾರ್ಧನರೆಡ್ಡಿ ಮನೆ ಮುಂದೆ ಜ.1 ರಂದು ನಡೆದ ಬ್ಯಾನರ್ ಗಲಾಟೆ, ಫೈರಿಂಗ್ ಪ್ರಕರಣದ ಸ್ಥಳಕ್ಕೆ ಹೊಸದಾಗಿ ಆಗಮಿಸಿರುವ ಬಳ್ಳಾರಿ ವಲಯದ ಡಿಐಜಿಪಿ ಡಾ.ಪಿ.ಎಸ್. ಹರ್ಷ ಅವರು ನಿನ್ನೆ ಅಧಿಕಾರ ಸ್ವೀಕತಿಸದ ತಕ್ಷಣ ಸಿಬ್ಬಂದಿಯೊಂದಿಗೆ ಆಗಮಿಸಿ ಪರೊಶೀಲನೆ ನಡೆಸಿ ಮಾಹಿತಿ ಪಡೆದರು.

ನಗರ ಡಿವೈಎಸ್ಪಿ ಚಂದ್ರಕಾಂತ್ ನಂದರೆಡ್ಡಿ, ಪ್ರಕರಣಗಳ ತನಿಕಾಧಿಕಾರಿಗಳು ಘಟನೆ ನಡೆದ ಬಗ್ಗೆ ಸಂಪೂರ್ಣ ಮಾಹಿತಿ ನೀಡಿದರು.

# ಗೋದುತಾಯಿ ನಗರದಲ್ಲಿ ಶರಣಬಸವೇಶ್ವರರ ಮಹಾ ತೊಟ್ಟಿಲೋತ್ಸವ

**ಕಲಬುರಗಿ,ಜ.09–**ಇಲ್ಲಿನ ಗೋದುತಾಯಿ ನಗರದ ಶಿವಮಂದಿರ ಆವರಣದಲ್ಲಿ ಗುರುವಾರ ಸಂಜೆ ಶರಣಬಸವೇಶ್ವರರ ಮಹಾ ತೊಟ್ಟಿಲೋತ್ಸವ ಹಾಗೂ ಸಹಸ್ರ ದೀಪೋತ್ಸವದ ಸಂಭ್ರಮದಿಂದ ಜರುಗಿತು.

ಕಾರ್ಯಕ್ರಮವನ್ನು ಗಣ್ಯರಿಂದ ಜ್ಯೋತಿ ಬೆಳಸುವ ಮೂಲಕ ಶರಣಬಸವೇಶ್ವರರ ಮಹಾತೊಟ್ಟಿಲೋತ್ಸವಕ್ಕೆ ಚಾಲನೆ ನೀಡಲಾಯಿತು. ನೂರಾರು ಮಹಿಳೆಯರ ಸಮ್ಮುಖದಲ್ಲಿ ಹಲವರು ಪುಷ್ಪಾಲಂಕೃತ ತೊಟ್ಟಿಲು ತೂಗಿದರು.

ಈ ಸಂದರ್ಭದಲ್ಲಿ ಡಾ.ಪೂಜ್ಯ ಲಿಂಗರಾಜಪ್ಪ ಅಪ್ಪ, ಗೋದುತಾಯಿ ನಗರ ಅಭಿವೃದ್ಧಿ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ ಪಾಟೀಲ, ಮಹಾನಗರ ಪಾಲಿಕೆ ಸದಸ್ಯ ಮಲ್ಲಿಕಾರ್ಜುನ ಉದನೂರ, ಕಾಂಗ್ರೆಸ್ ಮುಖಂಡ ಶರಣಗೌಡ ಅಲ್ಲಮಪ್ರಭು ಪಾಟೀಲ, ಚಂದ್ರಶೇಖರ್ ಸಿಲವಂತ, ಬಸವರಾಜ್, ಲಿಂಗರಾಜಪ್ಪ ಅಪ್ಪ ಅವರ ಮಗಳು ಶ್ರವಣಾ, ಅಳಿಯ ಸುಭಾಷ ಸೇರಿದಂತೆ ಹಲವರು ವೇದಿಕೆಯಲ್ಲಿದ್ದರು. ಶರಣ ಬಸವೇಶ್ವರರ ಮಹಾತೊಟ್ಟಿಲೋತ್ಸವದಲ್ಲಿ ನೂರಾರು ಮಹಿಳೆಯರು ಪಾಲ್ಗೊಂಡಿದ್ದರು. ಸಮಾರಂಭದ ಬಳಿಕ ಭಕ್ತರಿಗೆ ಅನ್ನಪ್ರಸಾದ ಉಣಬಡಿಸಲಾಯಿತು.

## ಬಾಲ್ಯವಿವಾಹ: ಯುವಕನಿಗೆ 20 ವರ್ಷ ಜೈಲು; ಪೋಷಕರಿಗೂ ಶಿಕ್ಷೆ

**ಕಲಬುರಗಿ,ಜ.09 :** ಅಪ್ರಾಪ್ತ ಬಾಲಕಿಯನ್ನು ಮದುವೆಯಾದ ಯುವಕನಿಗೆ ಪೊಕ್ಸೊ ಕಾಯ್ದೆಯಡಿ 20 ವರ್ಷ ಕಠಿಣ ಜೈಲು ಶಿಕ್ಷೆ ಹಾಗೂ 15 ಸಾವಿರ ರೂ. ದಂಡವನ್ನು ಇಲ್ಲಿನ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ (ವಿಶೇಷ ಪೊ?ಕ್ಸೊ) ನ್ಯಾಯಾಲಯ ವಿಧಿಸಿದೆ.

ಜೊತೆಗೆ ಯುವಕ ಹಾಗೂ ಬಾಲಕಿಯ ತಂದೆ-ತಾಯಂದಿರಿಗೂ ತಲಾ ಒಂದು ವರ್ಷ ಜೈಲು ಶಿಕ್ಷೆ ಹಾಗೂ 5 ಸಾವಿರ ರೂ ಸಾವಿರ ದಂಡ ವಿಧಿಸಿದೆ.ಅಳಂದ ತಾಲ್ಲೂಕಿನ ಗುಳ್ಳೊಳ್ಳಿ ತಾಂಡಾದ ನಿತಿನ್ ನೀಲು ಪವಾರ (25) ಶಿಕ್ಷೆಗೆ ಒಳಗಾದ ಯುವಕ.ಬಾಲ್ಯವಿವಾಹ ನಿಷೇಧ ಕಾಯ್ದೆಯಡಿ ಯುವಕನ ತಂದೆ ನೀಲು ಪವಾರ, ತಾಯಿ ಹಾಗೂ ಬಾಲಕಿಯ ತಂದೆ-ತಾಯಿಗೆ ಒಂದು ವರ್ಷ ಜೈಲು ಶಿಕ್ಷೆ ದಂಡ ವಿಧಿಸಿ ನ್ಯಾಯಾಧೀಶ ಮಹ್ಮದ್ ಮುಜೀರ್ ಉಲ್ಲಾ ಸಿ.ಜಿ. ಅವರು ಆದೇಶಿಸಿದ್ದಾರೆ.

2023ರ ಮೇ 17 ರಂದು ಯುವಕನ ಮದುವೆಯು 16 ವರ್ಷದ ಬಾಲಕಿ ಜೊತೆಗೆ ಆಳಂದದ ಕಲ್ಯಾಣ ಮಂಟಪದಲ್ಲಿ ನೆರವೇರಿತ್ತು.

ಬಾಲಕಿಗೆ 17 ವರ್ಷ 6 ತಿಂಗಳಿದ್ದಾಗ ಮಗುವಾಗಿತ್ತು. ಹೆರಿಗೆಗಾಗಿ ಆಸ್ಪತ್ರೆಗೆ ಹೋಗಿದ್ದಾಗ ಬಾಲ್ಯ ವಿವಾಹ ಪ್ರಕರಣ ಬೆಳಕಿಗೆ ಬಂದಿತ್ತು.ಸರಕಾರದ ಪರವಾಗಿ ವಿಶೇಷ ಸರಕಾರಿ ಅಭಿಯೋಜಕ ಶಾಂತವೀರ ಬಿ ತುಪ್ಪದ ಅವರು ವಾದ ಮಂಡಿಸಿದ್ದರು.

# ಎ.ಪಿ.ಎಂ.ಸಿ. ಹಮಾಲರಿಗೆ ಸಚಿವ ಎನ್.ಎಸ್.ಬಿ ರಿಂದ ನಿವೇಶನಗಳ ಹಕ್ಕು ಪತ್ರ ವಿತರಣೆ



ಯುವಮಾರ್ಗ ಸುದ್ದಿ

**ಮಾನ್ವಿ,ಜ.9–** ಪಟ್ಟಣದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಆವರಣದಲ್ಲಿ ತಾಲೂಕು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಹಾಗೂ ಶ್ರೀ ಉದ್ಭವ ಆಂಜನೇಯ ಹಮಾಲರ ಸಂಘ ಎ.ಐ.ಟಿ.ಯು.ಸಿ, ಸಂಯೋಜಿತ ಮಾನ್ವಿ ಸಂಯುಕ್ತಾಶ್ರಯದಲ್ಲಿ ನಡೆದ ಎ.ಪಿ.ಎಂ.ಸಿ. ಹಮಾಲರಿಗೆ ನಿವೇಶನಗಳ ಹಕ್ಕು ಪತ್ರ ವಿತರಣೆ ಕಾರ್ಯಕ್ರಮದಲ್ಲಿ ತಾಲೂಕು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಆವರಣದಲ್ಲಿ ಹಮಾಲಿ ಕಾರ್ಮಿಕರಿಗೆ ನಿವೇಶನಗಳ ಹಕ್ಕುಪತ್ರಗಳನ್ನು ವಿತರಿಸಿ ರಾಜ್ಯ ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್. ಬೋಸರಾಜು ಮಾತನಾಡಿ ತಾಲೂಕಿನ ತಾಲೂಕು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಆವರಣದಲ್ಲಿ ಹಮಾಲಿ ವೃತ್ತಿ ಮಾಡುತ್ತಿರುವ ನೂರಾರು ಹಮಾಲಿ ಕಾರ್ಮಿಕರಿಗೆ ತಮ್ಮದೆ ಒಂದು ಸೂರು ಇರಬೇಕು ಎನ್ನುವ ಉದ್ದೇಶದಿಂದ 2003 ರಲ್ಲಿ ನನ್ನ ಶಾಸಕತ್ವದ ಅವಧಿಯಲ್ಲಿ ಜಾನುವಾರು ಮಾರುಕಟ್ಟೆ ಹಾಗೂ ಗೋಧಮು,ಸೇರಿದಂತೆ ಹಮಾಲಿ ಕೂಲಿ ಕಾರ್ಮಿಕರಿಗಾಗಿ 10 ಎಕರೆ ಭೂಮಿಯನ್ನು ಖರೀದಿಸಿ 120 ನಿವೇಶನಗಳನ್ನು ರೂಪಿಸಲಾಗಿತ್ತು ನಂತರದಲ್ಲಿ ಬಂದ ಶಾಸಕರು ಹಮಾಲಿ ಕಾರ್ಮಿಕರಿಗೆ ನಿವೇಶನಗಳನ್ನು ಹಂಚಿಕೆ ಮಾಡದೆ ಇರುವುದರಿಂದ ಹಮಾಲಿ ಕಾರ್ಮಿಕರು ನಿವೇಶನ ವಂಚಿತರಾಗಬೇಕಾಯಿತು. ಈ ಕುರಿತು ಶ್ರೀ ಉದ್ಭವ ಆಂಜನೇಯ ಹಮಾಲರ ಸಂಘದ ಪ್ರತಿನಿಧಿಗಳು ನನ್ನ ಗಮನಕ್ಕೆ ತಂದ ನಂತರ ಕೃಷಿ ಉತ್ಪನ್ನ ಮಾರುಕಟ್ಟೆಯ ಉನ್ನತ ಅಧಿಕಾರಿಗಳಿಗೆ ಸೂಚನೆ ನೀಡಿ ಅರ್ಜಿ ಸಲ್ಲಿಸಿದ ಅರ್ಹ 73 ಫಲಾನುಬವಿಗಳಿಗೆ ಇಂದು ಹಕ್ಕು ಪತ್ರಗಳನ್ನು ವಿತರಿಸಲಾಗುತ್ತಿದೆ ಪುರಸಭೆ ವತಿಯಿಂದ ವಿವಿಧ ಯೋಜನೆಯಡಿಯಲ್ಲಿ ಹಮಾಲರಿಗೆ ನಿವೇಶನಗಳಲ್ಲಿ ಮನೆಗಳನ್ನು ಕಟ್ಟಿಕೊಡಲಾಗುವುದು. ಹಾಗೂ ಹಮಾಲರ ವಸತಿ ಪ್ರದೇಶದಲ್ಲಿ ರಸ್ತೆ,ನೀರು,ವಿದ್ಯುತ್, ಸೇರಿದಂತೆ ಅಗತ್ಯವಿರುವ ಎಲ್ಲಾ ನೂಲಸೌ ಲಭ್ಯಗಳನ್ನು ಕಲ್ಪಿಸಲಾಗುವುದು ಉಳಿದಿರುವ ನಿವೇಶನಗಳನ್ನು ಅರ್ಹ ಫಲಾನುಭಾವಿಗಳಿಗೆ ಹಂಚಿಕೆ ಮಾಡುವುದಕ್ಕೆ ತಾಲೂಕು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಕಾರ್ಯದರ್ಶಿಗಳಿಗೆ ಸೂಚಿಸಲಾಗುವುದು.

ರಾಜ್ಯದಲ್ಲಿ ಕಾಂಗ್ರೇಸ್ ನೇತೃತ್ವದಲ್ಲಿ ಬಡವರ ಕಲ್ಯಾಣಕ್ಕಾಗಿ ಅನೇಕ ಯೋಜನೆಗಳನ್ನು ಜಾರಿ ಮಾಡಲಾಗುತ್ತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರು ರಾಜ್ಯದ ಬಡವರ ಹಾಗೂ ಮಹಿಳೆಯರ ಸಬಲಿಕರಣಕ್ಕಾಗಿ ಜಾರಿಗೆ ತಂದ ಪಂಚ ಗ್ಯಾರಂಟಿಗಳಿಂದ ಬಡಜನರ ಜೀವನ ಮಟ್ಟ ಸುಧರಿಸುತ್ತಿದೆ ಅನ್ನಭಾಗ್ಯ ಯೋಜನೆಯಡಿಯಲ್ಲಿ ನೀಡುತ್ತಿರುವ 10 ಕೇಜಿ ಅಕ್ಕಿಯಲ್ಲಿ ಪಡಿತರ ಕಾರ್ಡುದಾರರು 5ಕೇಜಿಯನ್ನು ಕಾಳಸಂತೆಯಲ್ಲಿ ಮಾರಾಟ ಮಾಡುತ್ತಿರುವುದು ಕಂಡು ಬಂದಿರುವುದರಿಂದ ಸರ್ಕಾರವು 10ಕೆಜಿ.ಅಕ್ಕಿಯಲ್ಲಿ 5ಕೇಜಿ ಅಕ್ಕಿಯನ್ನು ಕಡಿತಗೋಳಿಸಿ ಗೃಹಿಣಿಯರಿಗೆ ಅಗತ್ಯವಿರುವ ಎಣ್ಣೆ,ಉಪ್ಪು,ಸಕ್ಕರೆ,ಬೆಳೆ,ಸೇರಿದಂತೆ 5ಖಾದ್ಯ ಪದಾರ್ಥಗಳನ್ನು ಒಳಗೊಂಡ ಇಂದಿರಾ ಕೀಟ್‌ಅನ್ನು ನೀಡುವ ಯೋಜನೆಯನ್ನು ಜಾರಿಗೆ ತರಲಾಗುತ್ತಿದೆ. ಗ್ಯಾರಂಟಿ ಯೋಜನೆಗಳಿಂದ ಮಕ್ಕಳು ಶಾಲೆಗೆ ಗೈರಾಗುವುದು ಕಡಿಮೆಯಾಗಿದ್ದು. ಜೀವನ ಮಟ್ಟ ಸುಧರಾಣೆಯಾಗುತ್ತಿದೆ. ರಾಜ್ಯ ಸರ್ಕಾರದ ಯೋಜನೆಗಳು ರಾಜ್ಯದ ಎಲ್ಲಾ ಹಿಂದುಳಿದ ವರ್ಗದ ಜನರಿಗೆ ನೆರವಾಗುತ್ತಿವೆ ತಾಲೂಕಿನಲ್ಲಿ ಹೈವೆ ರಸ್ತೆಗಳ ಸುಧಾರಣೆ,ರೈಲು ಮಾರ್ಗಗಳಿಂದ ಹೆಚ್ಚಿನ ಅಭಿವೃದ್ದಿಯಾಗಲಿದೆ ಎಂದು ತಿಳಿಸಿದರು.

ಶಾಸಕ ಹಂಪಯ್ಯನಾಯಕ ಮಾತನಾಡಿ ನಾನು ಎ.ಪಿ.ಎಂ.ಸಿ.ಅಧ್ಯರಾಗಿದ ಅವಧಿಯಲ್ಲಿ ಹಮಾಲಿ ಕಾರ್ಮಿಕರಿಗೆ ನಿವೇಶನಕ್ಕಾಗಿ ಜಂಇನು ಖರೀದಿಸಲಾಗಿತ್ತು .ಇಂದು ಹಕ್ಕು ಪತ್ರಗಳನ್ನು ವಿತರಿಸಲಾಗುತ್ತಿದೆ. ತಾಲೂಕಿನ ಅಭಿವೃದ್ದಿಗೆ ರಾಜ್ಯದ ಮುಖ್ಯಮಂತ್ರಿಗಳು ಸಾಕಷ್ಟು ಅನುದಾನ ನೀಡುತ್ತಿದಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಶ್ರೀ ಉದ್ಭವ ಆಂಜನೇಯ ಹಮಾಲರ ಸಂಘ ಎ.ಐ.ಟಿ.ಯು.ಸಿ, ಸಂಯೋಜೀತ ಮಾನ್ವಿ ವತಿಯಿಂದ ರಾಜ್ಯ ಸಚಿವರಾದ ಎನ್.ಎಸ್.ಬೋಸರಾಜು,ಶಾಸಕ ಹಂಪಯ್ಯನಾಯಕ, ತಾಲೂಕು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಆಡಳಿತಾಧಿಕಾರಿ ರವಿಚಂದ್ರ, ಕಾರ್ಯದರ್ಶಿ ರಂಗನಾಥ ದೇಸಾಯಿ ಯವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ನಯೋಪ್ರ ಅಧ್ಯಕ್ಷರಾದ ಅಬ್ದುಲ್ ಗಫೂರಸಾಬ್, ರಾಜಾ ಸುಭಾಶ್ಚಂದ್ರನಾಯಕ, ಬಾಲಸ್ವಾಮಿಕೊಡ್ಲಿ, ಜಿಲ್ಲಾ ಹಿಂದುಳಿದ ಅಯೋಗದ ಅಧ್ಯಕ್ಷರಾದ ಕೆ.ಶಾಂತಪ್ಪ, ಗ್ಯಾರಂಟಿ ಸಮಿತಿಯ ತಾ.ಅಧ್ಯಕ್ಷರಾದ ಬಿ.ಕೆ.ಅಮರೇಶಪ್ಪ, ಮುಖಂಡರಾದ ಶರಣಪ್ಪ ಕೆ.ಗುಡದಿನ್ನಿ,.ಕೆ.ಬಸವಂತಪ್ಪ, ಮಾಜಿ ಎ.ಪಿ.ಎಂ.ಸಿ ಸದಸ್ಯರಾದ ಶಿವರಾಜ ನಾಯಕ,ಸುಬ್ಬರೆಡ್ಡಿ, ಎ.ಐ.ಟಿ.ಯು.ಸಿ ರಾಜ್ಯ ಕಾರ್ಯದರ್ಶಿ ಬಾಷುಮಿಯಾ,ಅಂಗನವಾಡಿ ಕಾರ್ಯಕರ್ತೆಯರ ಸಂಘದ ತಾ.ಅಧ್ಯಕ್ಷೆ.ಚನ್ನಮ್ಮ, ಶ್ರೀ ಉದ್ಭವ ಆಂಜನೇಯ ಹಮಾಲರ ಸಂಘ ಎ.ಐ.ಟಿ.ಯು.ಸಿ, ಸಂಯೋಜಿತ ಮಾನ್ವಿ ಅಧ್ಯಕ್ಷರಾದ ಹನುಮಂತ, ಕಾರ್ಯದರ್ಶಿ ಸಿದ್ದರಾಮಯ್ಯಸ್ವಾಮಿ ಸೇರಿದಂತೆ ಹಮಾಲಿ ಕಾರ್ಮಿಕರ ಕುಟುಂಬಗಳು ಭಾಗವಹಿಸಿದವು.

# ಪರೀಕ್ಷೆ ಅಕ್ರಮ: ತನಿಖೆಗೆ ಎಬಿವಿಪಿ ಆಗ್ರಹ




**ಕಲಬುರಗಿ,ಜ.09–**ನಗರದ ಸಿದ್ದಾರ್ಥ ಕಾನೂನು ಕಾಲೇಜಿನಲ್ಲಿ ನಡೆದ ಪರೀಕ್ಷೆ ಅಕ್ರಮ ಕುರಿತು ತನಿಖೆ ನಡೆಸುವಂತೆ ಎಬಿವಿಪಿ ಆಗ್ರಹಿಸಿದೆ.

ಈ ಸಂಬಂಧ ಇಲ್ಲಿನ ಅಪರ ಜಿಲ್ಲಾಧಿಕಾರಿ ಮುಖಾಂತರ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಕುಲಪತಿಗಳಿಗೆ ಮನವಿ ಪತ್ರ ಸಲ್ಲಿಸಲಾಗಿದೆ.

ಸಿದ್ದಾರ್ಥ ಕಾನೂನು ಮಹಾವಿದ್ಯಾಲಯದಲ್ಲಿ ನಡೆದ ಪರೀಕ್ಷೆಯ ಸಮಯದಲ್ಲಿ ಮೊದಲ ಪುಟ ಹೊರತುಪಡಿಸಿ ಉಳಿದ ಎಲ್ಲಾ ಪುಟಗಳು ಆದಲು ಬದಲು ಆಗಿರುವುದು ಮಾಧ್ಯಮದಲ್ಲಿ ಬರುತ್ತಿದೆ. ಆದ್ದರಿಂದ ಕಾನೂನು ವಿಶ್ವವಿದ್ಯಾಲಯ ನಡೆಸುವ ಪರೀಕ್ಷೆಯ ಗುಣಮಟ್ಟದ ಮೇಲೆ ಸಾವಿರಾರು ವಿದ್ಯಾರ್ಥಿಗಳಿಗೆ ಪ್ರಶ್ನೆ ಕಾಡುತ್ತಿದೆ. ವಿಶ್ವವಿದ್ಯಾಲಯ ಸೂಕ್ತ ತನಿಖೆ ನಡೆಸಿ ಪರೀಕ್ಷೆಯ ಅಕ್ರಮದಲ್ಲಿ ಕಾಲೇಜಿನ ಮಾತ್ರ ಕೈವಾಡವಿದೆ ಅಥವಾ ವಿಶ್ವವಿದ್ಯಾಲಯದ ಕೈವಾಡವಿದೆಯೋ ಎಂಬುವುದು ಸಾರ್ವಜನಿಕರಿಗೆ ಪ್ರಶ್ನೆ ಮೂಡುತ್ತಿದೆ. ಪರೀಕ್ಷೆಯ ಪಾವಿತ್ರ್ಯವನ್ನು ಸಂಪೂರ್ಣ ವಾಗಿ ಹಾಳುಮಾಡಿದೆ ವಿದ್ಯಾರ್ಥಿಗಳ ಸಮಾನತೆ ಮತ್ತು ನ್ಯಾಯಸಮ್ಮತ ಮೌಲ್ಯಮಾಪನ ಹಕ್ಕನ್ನು ಕಿತ್ತುಕೊಂಡಿದೆ ಕಾನೂನು ಕಲಿಸಬೇಕಾದ ಸಂಸ್ಥೆಯೇ ಕಾನೂನು ಉಲ್ಲಂಘಿಸಿದಂತಾಗಿದೆ. ಆದ್ದರಿಂದ ವಿಶ್ವವಿದ್ಯಾಲಯ ಪರೀಕ್ಷೆಯ ಗುಣಮಟ್ಟದ ಬಗ್ಗೆ ವಿಶ್ವವಿದ್ಯಾಲಯ ಗಂಭೀರವಾಗಿ ಪರಿಗಣಿಸಿ ಉನ್ನತ ತನಿಖೆ ಮಾಡಬೇಕೆಂದು ಮನವಿ ಪತ್ರದಲ್ಲಿ ಆಗ್ರಹಿಸಲಾಗಿದೆ.

ಈ ಪ್ರಕರಣದಲ್ಲಿ ಭಾಗಿಯಾದ ಸಿದ್ದಾರ್ಥ ಕಾಲೇಜಿನ ಮೇಲೆ ಯಾವ ಕ್ರಮ ಕೈಗೊಂಡಿದ್ದಿರಿ ಎಂದು ಸ್ಪಷ್ಟಪಡಿಸಬೇಕು. ಇಂತಹ ಪ್ರಕರಣದಲ್ಲಿ ಭಾಗಿಯಾಗಿರುವ ಕಾಲೇಜಿನ ಅನುಮತಿಯನ್ನು ರದ್ದು ಪಡಿಸಬೇಕು, ಒಂದು ವೇಳೆ ಈ ಘಟನೆ ವಿಶ್ವವಿದ್ಯಾಲಯ ನಿರ್ಲಕ್ಷಿಸಿದ್ದರೆ ಎಬಿವಿಪಿ ಉಗ್ರವಾದ ಹೋರಾಟ ಮಾಡಬೇಕಾ ಗುತ್ತದೆ ಎಂದು ಎಚ್ಚರಿಕೆ ನೀಡಿದೆ.

ಈ ಸಂದರ್ಭದಲ್ಲಿ ನಗರ ಕಾರ್ಯದರ್ಶಿ ಶರಣು ಪೂಜಾರಿ, ಜಿಲ್ಲಾ ಸಂಚಾಲಕ ಮಂಜುನಾಥ ಕೊನ್ನೂರ, ವಿಭಾಗ ಕಾನೂನು ಸಂಚಾಲಕರಾದ ಜಗಳಪ್ಪ ಅನಿಕೇರಿ, ಪ್ರಾಂತ ಫಾರ್ಮ ವಿಷನ್ ಸಂಚಾಲಕ ಬಸವರಾಜ ಗುರುಗುಂಟಿ,ಅನಿಕೇತ ಸಾಕ್ರೆ, ಅಕ್ಷಯ ಕುಮಾರ, ಕಾಶಿನಾಥ್, ಮಲ್ಲಿಕಾರ್ಜುನ ,ಬಸವರಾಜ , ಮಯೂರ ಪೂಜಾರಿ, ಪವನ ಕುಮಾರ, ಸತೀಶ ರಾಥೋಡ , ಶಾಂತೇಶ ಚಕ್ಕಡಿ, ಹಾಗೂ ಕಾಲೇಜಿನ ವಿದ್ಯಾರ್ಥಿಗಳು ಇದ್ದರು.

# ಪಂಚ ಗ್ಯಾರಂಟಿ ಯೋಜನೆಗಳು ನಿಜವಾದ ಫಲಾನುಭವಿಗಳಿಗೆ ತಲುಪಿಸಿ : ವೆಂಕಟೇಶ ಗುತ್ತೆದಾರ

ಯುವಮಾರ್ಗ ಸುದ್ದಿ




**ಲಿಂಗಸುಗೂರು,ಜ9–** ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ನಿಜವಾದ ಫಲಾನುಭವಿಗಳಿಗೆ ತಲುಪುವಂತ್ತೆ ಅಧಿಕಾರಿಗಳು ಕ್ರಮವಹಿಸಿ ಎಂದು ತಾಲೂಕು ಗ್ಯಾರಂಟಿ ಯೋಜನೆ ಸಮಿತಿ ಅಧ್ಯಕ್ಷ ವೆಂಕಟೇಶ್ ಗುತ್ತೆದಾರ ಸೂಚಿಸಿದರು.

ಲಿಂಗಸುಗೂರು ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಶುಕ್ರವಾರ ನಡೆದ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನೆ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸರ್ಕಾರ ಬಡತನ ನೀಗಿಸಲು ಮತ್ತು ಜನ ಸಾಮಾನ್ಯರ ಆರ್ಥಿಕ ಅಭಿವೃದ್ಧಿಗೆ ಪಂಚ ಗ್ಯಾರಂಟಿ ಯೋಜನೆ ಮೂಲಕ ಸವಲತ್ತುಗಳನ್ನು ನೀಡುತ್ತಿದೆ. ಅಧಿಕಾರಿಗಳು ಕೇವಲ ಸಭೆಗಳಿಗೆ ಸೀಮಿತವಾಗದೆ ಗ್ಯಾರಂಟಿ ಯೋಜನೆಗಳು ನಿಜವಾದ ಫಲಾನುಭವಿಗಳಿಗೆ ತಲುಪುವ ಬಗ್ಗೆ ಅಧಿಕಾರಿಗಳು ನಿಗವಹಿಸಬೇಕು. ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸಮಿತಿ ಸದಸ್ಯರನ್ನು ಒಳಗೊಂಡಂತೆ ಸಭೆಗಳನ್ನು ಮಾಡಿ ಜಾಗೃತಿ ಮೂಡಿಸಬೇಕು. ಯಾರೊಬ್ಬರೂ ಕೂಡ ಅವಕಾಶಗಳಿಂದ ವಂಚಿತರಾಗಬಾರದು ಎಂದು ಸೂಚಿಸಿದರು.

ಆಹಾರ ಇಲಾಖೆಯ ತಾಲೂಕಿನಲ್ಲಿ ಅಂತ್ಯೋದಯ ಕಾರ್ಡ್ 6498, ಬಿ.ಪಿ.ಎಲ್ ಕಾ62624, ಮತ್ತು ಎ.ಪಿ.ಎಲ್ ಕಾರ್ಡ್ದಾರರು 1738 ಇದ್ದು, ಒಟ್ಟು 70860 ಕ್ಕೂ ಹೆಚ್ಚಿನ ಪಡಿತರದಾರರು ಪಡಿತರ ಪದಾರ್ಥ ಪಡೆಯುತ್ತಿದ್ದಾರೆ. ಆಹಾರ ಸರಬರಾಜು ಭದ್ರತೆ ಯೋಜನೆಯಡಿಯಲ್ಲಿ ಸರ್ಕಾರ ನೀಡುತ್ತಿರುವ ಪದಾರ್ಥಗಳು ಫಲನುಭವಿ ಗಳಿಗೆ ತಲುಪುತ್ತಿದೆ. ವೈದ್ಯಕೀಯ ಉಪಯೋಗಕ್ಕೆ ಅನಿವಾರ್ಯವಾದವರಿಗೆ ಮಾತ್ರ ಪ್ರೋರ್ಟಲ್ ತಾಂತ್ರಿಕತೆ ಮೂಲಕ ಪಡಿತರ ಚೀಟಿಗೆ ಅರ್ಜಿ ಸಲ್ಲಿಸಬಹುದು ಎಂದು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಕಾರ್ಯನಿರ್ವಾಹಕ ಅಧಿಕಾರಿ ಉಮೇಶ, ಸಾರಿಗೆ ಘಟಕ ವ್ಯವಸ್ಥಾಪಕ ಪ್ರಕಾಶ ದೊಡ್ಡಮನಿ, ಕಂದಾಯ ಅಧಿಕಾರಿ ರಾಮಕೃಷ್ಣ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ನಾಗರತ್ನ, ಗುಂಡಪ್ಪ ಸಾಹುಕಾರ, ಗದ್ದೆನಗೌಡ ಪಾಟೀಲ್, ಶಿವಕುಮಾರ್ ಪೂಜಾರಿ, ಶಬ್ಬೀರ್ ಹಟ್ಟಿ, ಅಸ್ಲಂಪಾಷಾ, ಬಸವರಾಜ ಆನ್ವರಿ, ಮಲ್ಲ

# ಔರಾದ ತಾಲೂಕು 7ನೇ ಕನ್ನಡ ಸಾಹಿತ್ಯ ಸಮ್ಮೇಳನಾಧ್ಯಕ್ಷರಾಗಿ ಡಾ.ಡೋಳೆ ಆಯ್ಕೆ




**ಔರಾದ್,ಜ.9–**ಪಟ್ಟಣದಲ್ಲಿ ಫೆ.4ರಂದು ನಡೆಯಲಿರುವ ಔರಾದ್ ತಾಲೂಕು 7ನೇ ಕನ್ನಡ ಸಾಹಿತ್ಯ ಸಮ್ಮೇಳನ ಸರ್ವಾಧ್ಯಕ್ಷರ ಹೆಸರು ಅಂತಿಮಗೊಂಡಿದ್ದು, ಹಿರಿಯ ಸಾಹಿತಿ, ಪ್ರಾಚಾರ್ಯ ಡಾ.ಮನ್ಮಥ ಡೋಳೆ ಅವರನ್ನು ಸಮ್ಮೇಳನದ ಸರ್ವಾಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಗಿದೆ.

ಔರಾದ್ ಪಟ್ಟಣದ ಕನ್ನಡ ಭವನದಲ್ಲಿ ಬುಧವಾರ ಸಂಜೆ ತಾಲೂಕು ಕಸಾಪ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಸರ್ವಾನುಮತದಿಂದ ಡಾ. ಮನ್ಮಥ ಡೋಳೆ ಅವರು ಆಯ್ಕೆಯಾಗಿದ್ದಾರೆ ಎಂದು ಕಸಾಪ ತಾಲೂಕು ಅಧ್ಯಕ್ಷ ಬಾಲಾಜಿ ಅಮರವಾಡಿ ತಿಳಿಸಿದ್ದಾರೆ.ಈ ಹಿಂದೆ ನಡೆದ ಸಮ್ಮೇಳನದ ಪೂರ್ವಭಾವಿ ಸಭೆಯಲ್ಲಿ ಸಮ್ಮೇಳನಾಧ್ಯಕ್ಷ ಸ್ಥಾನಕ್ಕೆ ಕನ್ನಡ ನಾಡು–ನುಡಿಗಾಗಿ ಶ್ರಮಿಸಿದ ಸಾಹಿತಿಗಳು, ಸಾಹಿತ್ಯೇತರ ಕ್ಷೇತ್ರಗಳ ಸಾಧಕರ ಹೆಸರು ಪ್ರಸ್ತಾಪವಾಗಿತ್ತು. ಬುಧವಾರ ಕಾರ್ಯಕಾರಿ ಸಭೆಯಲ್ಲಿ ನಡೆದ ಸುದೀರ್ಘ ಚರ್ಚೆಯ ಬಳಿಕ ತಾಲೂಕಿನ ಹಿರಿಯ ಸಾಹಿತಿ ಡಾ. ಮನ್ಮಥ ಡೋಳೆ ಅವರ ಹೆಸರು ಅಂತಿಮವಾಗಿದೆ.

ಈ ಸಂದರ್ಭದಲ್ಲಿ ಪ್ರಮುಖರಾದ ಡಾ.ವೈಜಿನಾಥ ಬುಟ್ಟೆ, ಗುರುನಾಥ ದೇಶಮುಖ, ಜಗನ್ನಾಥ ದೇಶಮುಖ, ಮಲ್ಲಿಕಾರ್ಜುನ ಟಂಕಸಾಲೆ, ಅಮೃತರಾವ ಬಿರಾದಾರ, ವಿರೇಶ ಅಲಮಾಜೆ, ಗೋವಿಂದ ಪಾಟೀಲ್, ಶರಣಬಸವ ಸಾವಳೆ, ಮಹಾನಂದಾ ಎಂಡೆ, ಮಾರುತಿ ಚವ್ಹಾಣ, ವಿರೇಶ ಮೀಸೆ, ಕೈಲಾಸಪತಿ ಕೇದಾರೆ, ಶಮಶೋದ್ದಿನ್ ಮುಲ್ಲಾ, ಸಂದೀಪ ಪಾಟೀಲ್, ಅಶೋಕ ಶೆಂಬೆಳ್ಳೆ ಸೇರಿದಂತೆ ಇನ್ನಿತರರಿದ್ದರು.

# ಅಮೆರಿಕದ ಸಾಮ್ರಾಜ್ಯಶಾಹಿ ನೀತಿ ಖಂಡನೆ; ವೆನೆಜುವೆಲಾ ಅಧ್ಯಕ್ಷರ ಬಿಡುಗಡೆಗೆ ಆಗ್ರಹ




**ಬೀದರ್:ಜ.09–**ಅಮೆರಿಕದ ಯುದ್ಧಪರ ಹಾಗೂ ಸಾಮ್ರಾಜ್ಯಶಾಹಿ ವಿದೇಶಾಂಗ ನೀತಿಯನ್ನು ಭಾರತ ಕಮ್ಯೂನಿಸ್ಟ್ ಪಕ್ಷ (ಸಿಪಿಐ) ಬೀದರ್ ಜಿಲ್ಲಾ ಮಂಡಳಿ ತೀವ್ರವಾಗಿ ಖಂಡಿಸಿದೆ. ಅಮೆರಿಕವು ವಿವಿಧ ದೇಶಗಳಲ್ಲಿ ಚುನಾಯಿತ ಸರ್ಕಾರಗಳನ್ನು ಪತನಗೊಳಿಸಿ, ತನ್ನ ಪರವಾದ ಬಲಪಂಥೀಯ ಆಡಳಿತಗಳನ್ನು ಸ್ಥಾಪಿಸುತ್ತಿ ರುವುದನ್ನು ವಿರೋಧಿಸಿ, ಸಿಪಿಐ ವತಿಯಿಂದ ಪ್ರಧಾನಮಂತ್ರಿಗಳಿಗೆ ಮನವಿ ಪತ್ರ ಸಲ್ಲಿಸಲಾಗಿದೆ.

ವೆನೆಜುವೆಲಾ ದೇಶದ ನೈಸರ್ಗಿಕ ಸಂಪತ್ತನ್ನು ಲೂಟಿ ಮಾಡುವ ಉದ್ದೇಶದಿಂದ ದಿನಾಂಕ 3 ಜನವರಿ 2026 ರಂದು ಅಮೆರಿಕವು ವೈಮಾನಿಕ ದಾಳಿ ನಡೆಸಿ, ಆ ದೇಶದ ಅಧ್ಯಕ್ಷ ನಿಕೊಲಸ್ ಮಡೂರೊ ಮತ್ತು ಅವರ ಪತ್ನಿಯನ್ನು ಬಂಧಿಸಿ ಅಮೆರಿಕಾಕ್ಕೆ ಕರೆದೊಯ್ದಿರುವುದು ಅಂತರರಾಷ್ಟ್ರೀಯ ಕಾನೂನು ಗಳಿಗೆ ವಿರುದ್ಧವಾಗಿದೆ ಎಂದು ಸಿಪಿಐ ಆರೋಪಿಸಿದೆ. ಕೂಡಲೇ ಅವರನ್ನು ಬಿಡುಗಡೆಗೊಳಿಸಬೇಕು ಹಾಗೂ ಅಮೆರಿಕದ ಸಾಮ್ರಾ ಜ್ಯಶಾಹಿ ಧೋರಣೆಗೆ ಭಾರತ ಸರ್ಕಾರ ಮಧ್ಯಪ್ರವೇಶಿಸಬೇಕೆಂದು ಮನವಿ ಮಾಡಲಾಗಿದೆ.

ಈ ಸಂದರ್ಭದಲ್ಲಿ ಸಿಪಿಐ ಜಿಲ್ಲಾ ಮಂಡಳಿ ಕಾರ್ಯಕಾರಿ ಸಮಿತಿ ಸದಸ್ಯ ಬಾಬುರಾವ ಹೊನ್ನಾ, ಜಿಲ್ಲಾ ಕಾರ್ಯದರ್ಶಿ ನಜೀರ ಅಹ್ಮದ, ಸಹ ಕಾರ್ಯದರ್ಶಿ ಶಫಾಯತ್ ಅಲಿ, ಖಜಾಂಚಿ ಜೈಶೀಲಕುಮಾರ, ಪ್ರಭು ಹುಚಕನಳ್ಳಿ, ಶೀಲಾ ಸಾಗರ, ಮೋಹಿದಮಿಯ್ಯಾ, ಮಹ್ಮದ ಖಮರ್ ಪಟೇಲ್, ವೀರಶೆಟ್ಟಿ ವಟಂಬೆ, ಖದೀರಮಿಯ್ಯಾ ಸೇರಿದಂತೆ ಅನೇಕ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ನಾಲ್ಕನೇ ದಿನಕ್ಕೆ ಕಾಲಿರಿಸಿದ ಪ್ರಣವಾನಂದ ಶ್ರೀಗಳ ಪಾದಯಾತ್ರೆ



**ಕಲಬುರಗಿ,ಜ.09–** ಪ್ರಣವಾನಂದ ಶ್ರೀಗಳವಾನಂದ ಶ್ರೀಗಳು ಈಡಿಗ, ಬಿಲ್ಲವ ಸೇರಿದಂತೆ 26 ಪಂಗಡಗಳ 18 ಬೇಡಿಕೆಗಳನ್ನು ಒತ್ತಾಯಿಸಿ ನಡೆಸುತ್ತಿರುವ 700 ಕಿಲೋಮೀಟರ್ ಉದ್ದದ ಪಾದಯಾತ್ರೆ, ನಾಲ್ಕನೇ ದಿನಕ್ಕೆ ಕಾಲಿರಿಸಿದ್ದು ವ್ಯಾಪಕ ಜನ ಬೆಂಬಲ ವ್ಯಕ್ತವಾಗುತ್ತಿದೆ.ಕರದಾಳ, ಚಿತ್ತಾಪುರ,ರಾವೂರ, ಶಾಬಾದ್ ಜೇವರ್ಗಿ ಕ್ರಾಸ್,ಕಟ್ಟಿಸಂ ಗಾವಿ, ಜೇವರ್ಗಿ, ಚಿಗರಳ್ಳಿ ಕ್ರಾಸ್ ಅಂದೋಲ ಮೂಲಕ ತೆರಳಿ ಜನವರಿ 9ರಂದು ಚಿಕ್ಕ ಮುಡಬಾಳದಲ್ಲಿ ವಾಸ್ತವ್ಯ ಹೂಡಲಿದೆ. ಈ ವರೆಗೆ 72 ಕೀ .ಮೀ ಪಾದಯಾತ್ರೆ ಪೂರ್ಣಗೊಂಡಿದೆ.ಜ.10 ರಂದು ಶನಿವಾರ ತಾರೀಕು ನಾಳೆ ಚಿಕ್ಕಮುಡಬಾಳದಿಂದ ಅಳ್ಳಳ್ಳಿ, ಭೀಮರಾಯನ ಗುಡಿ ಸರಿಯಾಗಿ ಶಾಪುರದ ಪಟ್ಟಣವನ್ನು ಸೇರಲಿದೆ. ಶಹಾಬಾದ ಹೊರಟ ಪಾದಯಾತ್ರೆಯಲ್ಲಿ ಕೂಲಿ ಸಮುದಾಯದ ಶ್ರೀಮಲ್ಲಣ್ಣ ಮುತ್ಯ , ಉಪ್ಪಾರ ಸಮುದಾಯದ ಶ್ರೀ ಭಗೀರಥಾನಂ ದಪುರಿ ಸ್ವಾಮೀಜಿ ಹೆಜ್ಜೆ ಹಾಕಿದರು. ಜೇವರ್ಗಿ ಪಟ್ಟಣದಲ್ಲಿ ಪಾದಯಾತ್ರೆಯನ್ನು ಅದ್ದೂರಿಯಾಗಿ ಸ್ವಾಗತಿಸಿ ಹಲಿಗೆ ಡೊಳ್ಳು ವಾದನದೊಂದಿಗೆ ಸಜ್ಜನ ಕಲ್ಯಾಣ ಮಂಟಪಕ್ಕೆ ಕರೆದೊಯ್ಯಲಾಯಿತು. ನಂತರ ನಡೆದ ಸಮಾಜದ ಜಾಗೃತಿ ಸಭೆಯಲ್ಲಿ ತೆಲಂಗಾಣದ ರಾಜ್ಯದ ಮಾಜಿ ಸಚಿವರಾದ ವಿ ಶ್ರೀನಿವಾಸ್ ಗೌಡ, ಬಸವಕಲ್ಯಾಣದ ಮಾಜಿ ಶಾಸಕ ಮಲ್ಲಿಕಾರ್ಜುನ ಖೂಬಾ ಹಾಗೂ ಕಲಬುರಗಿ ಜಿಲ್ಲೆಯ ಈಡಿಗ ಸಮುದಾಯದ ನಾಯಕ ರಾದ ಬಾಲರಾಜ್ ಗುತ್ತೇದಾರ್, ಆಳಂದದ ಸಂತೋಷ್ ಗುತ್ತೇದಾರ್, ವೆಂಕಟೇಶ್ ಕಡೇಚೂರ್ , ಮಹಾದೇವ ಗುತ್ತೇದಾರ್ , ಶ್ರೀ ಕುಪೇಂದ್ರ ಗುತ್ತೇದಾರ್ ನಾಗೂರ, ಸುರೇಶ್ ಮಟ್ಟೂರು , ಪ್ರವೀಣ್ ಗು ಜತ್ತನ್, ಅಂಬಯ್ಯ ಇಬ್ರಾಹಿಂಪುರ್, ರಾಜೇಶ್ ದತ್ತು ಗುತ್ತೇದಾರ್ ಹಾಗೂ ಜೇವರ್ಗಿ ತಾಲೂಕಿನ ಸಮುದಾಯದ ಮುಖಂಡರುಗಳು ಐತಿಹಾಸಿಕ ಪಾದಯಾತ್ರೆಗೆ ಅಭೂತಪೂರ್ವದ ಸ್ವಾಗತವನ್ನು ನೀಡಿದರು.

ಫೆಬ್ರವರಿ12 ರಂದು ಫ್ರೀಡಂ ಪಾರ್ಕಿನಲ್ಲಿ ಪಾದಯಾತ್ರೆ ಸಮಾಪನಗೊಳ್ಳಲಿದ್ದು ಆ ದಿನ ಜೇವರ್ಗಿಯಿಂದ ಮೂರು ಬಸ್ಸಿನ ಮೂಲಕ ಕುಲಬಾಂ ಧವರು ಕಾರ್ಯಕ್ರಮದಲ್ಲಿ ಭಾಗವಹಿಸುವುದಾಗಿ ಜೇವರ್ಗಿಯ ಈಡಿಗ ಸಮುದಾಯದ ಮುಖಂಡರುಗಳು ತಿಳಿಸಿದ್ದಾರೆ ಎಂದು ಮಾಧ್ಯಮ ಸಂಚಾಲಕರಾದ ಡಾ.ಸದಾನಂದ ಪೆರ್ಲ ತಿಳಿಸಿದರು.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H